ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ಕನ್ನಡದಿನ ಪತ್ರಿಕೆ

ರಾಯಚೂರಿನಿಂದ ರಾಜ್ಯದವರೆಗೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issue : 122 | ದಿನಾಂಕ : 10-06-2026 ಬುಧವಾರ Date : 10-06-2026 Wednesday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ದಾವಣಗೆರೆ: ಮಹಿಳೆ ಮೇಲೆ ಗ್ಯಾಂಗ್ ರೇಪ್ 10 ಆರೋಪಿಗಳ ಬಂಧನ

**ದಾವಣಗೆರೆ,ಜೂ.9**–ದಾವಣಗೆರೆ ಜಿಲ್ಲೆಯಲ್ಲಿ ಸಮಾಜ ತಲೆತಗ್ಗಿಸುವಂತ ಕೃತ್ಯ ನಡೆದಿದೆ. ಹತ್ತು ಜನ ಆರೋಪಿಗಳು 41 ವರ್ಷದ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿರುವ ಆರೋಪ ಕೇಳಿಬಂದಿದೆ.

ಈ ಕುರಿತು ಸಂತ್ರಸ್ತ ಮಹಿಳೆಯು ಬಸವಾ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಪೊಲೀಸರು ಆರೋಪಿಗಳನ್ನು ಬಂಧಿಸಿ, ವಿಚಾರಣೆಗೊಳಪಡಿಸಿದ್ದಾರೆ.

ತವರು ಮನೆಗೆ ಹೋಗುತ್ತಿದ್ದ ಮಹಿಳೆ ಮೇಲೆ ನೀಚ ಕೃತ್ಯ: ಸಂತ್ರಸ್ತೆಯು ತನ್ನ ಗಂಡನ ಮನೆಯಿಂದ ತವರು ಮನೆಗೆ ಜೂನ್ 3ರ ಸಂಜೆ 7 ಗಂಟೆಯ ಸುಮಾರಿಗೆ ನಡೆದುಕೊಂಡು ಹೋಗುತ್ತಿದ್ದರು. ಈ ವೇಳೆ ದಾರಿ ಮಧ್ಯೆ ಇಬ್ಬರು ಯುವಕರು ಮತ್ತು ಬರುವ ಔಷಧ ➘ 4

## ಸಿಎಂ ಡಿಕೆಶಿ ಮುಖ್ಯ ಸಲಹೆಗಾರನಾಗಿ ಸುನಿಲ್ ಕನುಗೋಳು ನೇಮಿಸಿ ಆದೇಶ, ಸಂಪುಟ ದರ್ಜೆ ಸ್ಥಾನಮಾನ

**ಬೆಂಗಳೂರು,ಜೂ.9**–ಕಾಂಗ್ರೆಸ್‌ನ ಚುನಾವಣಾ ಚಾಣಕ್ಯ ಎಂದೇ ಹೆಸರಾಗಿರುವ ಸುನೀಲ್ ಕನುಗೋಳು ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮುಖ್ಯ ಸಲಹೆಗಾರರನ್ನಾಗಿ ನೇಮಿಸಿ ರಾಜ್ಯ ಕಾಂಗ್ರೆಸ್ ಸರ್ಕಾರ ಆದೇಶಿಸಿದೆ.

ಸುನಿಲ್ ಕನುಗೋಳು ಹಿಂದಿನ ಸಿಎಂ ಸಿದ್ದರಾಮಯ್ಯರಿಗೂ ಸಲಹೆಗಾರರಾಗಿ ನೇಮಿಸಲಾಗಿತ್ತು. ಇದೀಗ ಅವರನ್ನು ಸಿಎಂ ಡಿ.ಕೆ.ಶಿವಕುಮಾರ್ ಮುಖ್ಯ ಸಲಹೆಗಾರರನ್ನಾಗಿ ನೇಮಿಸಲಾಗಿದೆ. ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಮುಖ್ಯಮಂತ್ರಿಯವರ ಮುಖ್ಯ ಸಲಹೆಗಾರರನ್ನಾಗಿ ನೇಮಿಸಿ ಸಂಪುಟ ದರ್ಜೆಯ ಸಚಿವರ ಸ್ಥಾನಮಾನದೊಂದಿಗೆ ಲಭ್ಯವಿರುವ ➘ 4

## ಮಂಡ್ಯ: ಪತ್ನಿ, ನವವಿವಾಹಿತ ಮಗನ ಕೊಂದು ಬಟ್ಟೆ ವ್ಯಾಪಾರಿ ಆತ್ಮಹತ್ಯೆ

**ಮಂಡ್ಯ,ಜೂ.9**–ಬಟ್ಟೆ ವ್ಯಾಪಾರಿಯೊಬ್ಬ ತನ್ನ ಪತ್ನಿ ಮತ್ತು ಪುತ್ರನನ್ನು ಕೊಂದು ಬಟ್ಟೆ ಅಂಗಡಿಯಲ್ಲಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಇಲ್ಲಿನ ನೆಹರು ನಗರದಲ್ಲಿ ಕಳೆದ ರಾತ್ರಿ ನಡೆದಿದ್ದು, ಇಂದು ಬೆಳಕಿಗೆ ಬಂದಿದೆ.

ಬಟ್ಟೆ ವ್ಯಾಪಾರಿ ಪ್ರಭಾಕರ್, ಪತ್ನಿ ಜ್ಯೋತಿ ಹಾಗೂ ಮಗ ಸಂತೋಷ್ ಮೃತಪಟ್ಟವರು.

ವ್ಯಾಪಾರದಲ್ಲಿ ನಷ್ಟ ಮತ್ತು ಸಾಲದೊತ್ತಡದಿಂದ ಪ್ರಭಾಕರ್ ಮೊದಲು ಮನೆಯಲ್ಲಿ ಪತ್ನಿ ಜ್ಯೋತಿ ಮತ್ತು ಮಗ ಸಂತೋಷ್ ಅವರನ್ನು ಉಸಿರುಗಟ್ಟಿಸಿ ಕೊಲೆ ಮಾಡಿದ್ದಾರೆ. ಬಳಿಕ ತಮ್ಮ ಬಟ್ಟೆ ಅಂಗಡಿಗೆ ಬಂದು ನೇಣು ಬಿಗಿದುಕೊಂಡು ಸಾವನ್ನಪ್ಪಿದ್ದಾರೆ.

ಘಟನಾ ಸ್ಥಳಕ್ಕೆ ಮಂಡ್ಯ ಪೂರ್ವ ಠಾಣೆಯ ಪೊಲೀಸರು ಹಾಗೂ ಮಂಡ್ಯ ಎಸ್ಪಿ ಶೋಭಾರಾಣಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ತಿಂಗಳ ಹಿಂದಷ್ಟೇ ಮಗನ ಮದುವೆ ಆಗಿತ್ತು: ➘ 4

### 2 ದಿನ ದೆಹಲಿಯಲ್ಲೇ ಠಿಕಾಣಿ: ಸಚಿವರ ಖಾತೆ ಖ್ಯಾತೆ,

## ಸಂಪುಟ ವಿಸ್ತರಣೆ ಕುರಿತಂತೆ ಹೈಕಮಾಂಡ್ ಜೊತೆ ಸಿಎಂ ಶಿವಕುಮಾರ್ ಚರ್ಚೆ..!

■ ಕನ್ನಡ ಮಾತೃ ಭೂಮಿ ವಾರ್ತೆ



**ಬೆಂಗಳೂರು,ಜೂ.10**–ಕಾಂಗ್ರೆಸ್ ಸಚಿವರ ಖಾತೆ ಖ್ಯಾತೆ ಬೆನ್ನಲ್ಲೇ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಎರಡು ದಿನಗಳ ಕಾಲ ನವದೆಹಲಿಯಲ್ಲೇ ಠಿಕಾಣಿ ಹೂಡಲಿದ್ದಾರೆ. ಖಾತೆ ಕುರಿತಂತೆ ಕೆಲವು ಸಚಿವರ ಅಸಮಾಧಾನದ ನಡುವೆಯೂ ಸಂಪುಟ ವಿಸ್ತರಣೆ ಮತ್ತು ಖಾತೆ ಹಂಚಿಕೆ ವಿಷಯಗಳ ಕುರಿತು ಹೈಕಮಾಂಡ್ ಜೊತೆ ಚರ್ಚಿಸುವ ಸಾಧ್ಯತೆ ಇದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಮುಖ್ಯಮಂತ್ರಿಯಾದ ಬಳಿಕ ಇದೇ ಮೊದಲ ಬಾರಿಗೆ ದೆಹಲಿಗೆ ಡಿಕೆ ಶಿವಕುಮಾರ್ ಭೇಟಿ ನೀಡುತ್ತಿದ್ದಾರೆ. ನೀತಿ ಆಯೋಗದ ಆಡಳಿತ ಮಂಡಳಿ ಸಭೆಯಲ್ಲಿ ಭಾಗವಹಿಸಲಿದ್ದು ಕೆಲವು ಉನ್ನತ ಅಧಿಕಾರಿಗಳನ್ನು ಭೇಟಿ ಮಾಡಲಿದ್ದಾರೆ. ಬುಧವಾರ ಮಧ್ಯಾಹ್ನದ ವೇಳೆಗೆ ನವದೆಹಲಿಗೆ ತೆರಳಲಿರುವ ಡಿಕೆ ಶಿವಕುಮಾರ್ ಮೊದಲಿಗೆ ಎಐಸಿಸಿ ನಾಯಕರನ್ನು ಭೇಟಿ ಮಾಡಲಿದ್ದಾರೆ. ನಂತರ, ಅವರು ಎಐಸಿಸಿ ಕಚೇರಿ ಮತ್ತು ಪಕ್ಷದ ವಿವಿಧ ಮುಂಭಾಗದ ಸಂಸ್ಥೆಗಳ ಕಚೇರಿಗಳಿಗೆ ಭೇಟಿ ನೀಡಲಿದ್ದಾರೆ. ಸಂಜೆ ಹಿರಿಯ ಐಎಎಸ್ ಅಧಿಕಾರಿಗಳ ಸಭೆ ನಡೆಸಲಿದ್ದಾರೆ. ಗುರುವಾರ ನೀತಿ ಆಯೋಗದ 11ನೇ ಆಡಳಿತ ಮಂಡಳಿ ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿದುಬಂದಿದೆ.

ಮುಂದಿನ ಸಂಪುಟ ವಿಸ್ತರಣೆಯ ಸಮಯದಲ್ಲಿ ಸಚಿವ ಸ್ಥಾನಕ್ಕಾಗಿ ➘ 4

### ವಿಧಾನಸೌಧ ಆವರಣದಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು

## ಆತ್ಮಹತ್ಯೆಗೆ ಯತ್ನಿಸಿದ ರೈತ..!

■ ಕನ್ನಡ ಮಾತೃ ಭೂಮಿ ವಾರ್ತೆ

**ಬೆಂಗಳೂರು,ಜೂ.9**–ಚಿಕ್ಕಮಗಳೂರು ಜಿಲ್ಲೆಯ ರೈತನೊಬ್ಬ ಮಂಗಳವಾರ ಮಧ್ಯಾಹ್ನ ವಿಧಾನಸೌಧ ಆವರಣದಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ ಘಟನೆ ವರದಿಯಾಗಿದೆ.ಪೊಲೀಸರ ಸಕಾಲಿಕ ಮಧ್ಯಪ್ರವೇಶದಿಂದ ರೈತನ ಜೀವ ಉಳಿದಿದೆ. ಪೊಲೀಸರ ಪ್ರಕಾರ, ಚಿಕ್ಕಮಗಳೂರು ಜಿಲ್ಲೆಯ ಹಳಿಯೂರು ಗ್ರಾಮದ ವಿಶು ಕುಮಾರ್ ಎಂಬುವವರು ವಿಧಾನಸೌಧ ಆವರಣದಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು ➘ 4

### ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿ ಖಂಡಿಸಿ ಕಾಂಗ್ರೆಸ್ ಪ್ರತಿಭಟನೆ

## ಜನರ ಮೇಲೆ ಹೊರೆ ಹಾಕುವ ಕೇಂದ್ರ ಸರ್ಕಾರ ಕಿತ್ತೊಗೆಯಲು ಜನಾಂದೋಲನವಾಗಲಿ-ವಸಂತಕುಮಾರ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.10**–ಪೆಟ್ರೋಲ್, ಡಿಸೇಲ್ ಹಾಗೂ ಸಿಲೆಂಡರ್ ದರ ಏರಿಕೆ ವಿರೋಧಿಸಿ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ನಗರದ ಡಾ.ಬಿ.ಆರ್ ಅಂಬೇಡ್ಕರ್ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಪ್ರಧಾನಿ ನರೇಂದ್ರ ಮೋದಿ ವರ್ಷವಿಡೀ ವಿದೇಶ ಪ್ರವಾಸ ಮಾಡುತ್ತಾ ಕಾಲಕಳೆಯುತ್ತಿದ್ದಾರೆ. ಜನರಿಗೆ ಮಾತ್ರ ಪ್ರವಾಸಕ್ಕೆ ಹೋಗಬೇಡಿ ಎಂದು ಉಪದೇಶ ಮಾಡುತ್ತಿದ್ದಾರೆ.

ಭ್ರಷ್ಟ ಬಿಜೆಪಿ ಸರ್ಕಾರ ದೇಶದ ಆಡಳಿತವನ್ನು ದುರ್ಬಲಗೊಳಿಸಿದೆ. ಜನರಿಗೆ ಯಾವುದೇ ಅನುಕೂಲಗಳನ್ನು ಮಾಡಿಕೊಡುತ್ತಿಲ್ಲ. ಎಲ್‌ಪಿಜಿ ಸಿಲಿಂಡರ್, ರಸಗೊಬ್ಬರ, ಪೆಟ್ರೋಲ್, ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ನಿರಂತರ ಏರಿಕೆಯಾಗುತ್ತಿದ್ದು, ಜನರು ಕಂಗಾಲಾಗಿದ್ದಾರೆ ಎಂದು ದೂರಿದರು.

ಸಿಲಿಂಡರ್‌ಗೆ ನೀಡುತ್ತಿದ್ದ ಸಬ್ಸಿಡಿಯನ್ನು ಕೇಂದ್ರ ಸರ್ಕಾರ ಹಿಂಪಡೆದಿದೆ. ಇದರಿಂದ ದೇಶದ ಮಹಿಳೆಯರಿಗೆ ಅನ್ಯಾಯವಾಗುತ್ತಿದೆ. ಬಿಜೆಪಿಯವರು ಜನರ ಪರವಾಗಿ ಕೆಲಸ ಮಾಡುವ ಬದಲು ಜಾತಿ, ಧರ್ಮದ ಹೆಸರಿನಲ್ಲಿ ಜನರ ನಡುವೆ ವೈಮನಸ್ಸು ಸೃಷ್ಟಿಸುತ್ತಿದ್ದಾರೆ ಎಂದು ಆರೋಪಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ ಮಾತನಾಡಿ, ಕೇಂದ್ರದ ಬಿಜೆಪಿ ಸರ್ಕಾರ ಪೆಟ್ರೋಲ್, ಡಿಸೇಲ್ ಹಾಗೂ ಸಿಲೆಂಡರ್ ಬೆಲೆಯನ್ನು ಪದೇ ಪದೇ ಏರಿಕೆ ಮಾಡುತ್ತಾ ಜನಸಾಮಾನ್ಯರ ಮೇಲೆ ದೊಡ್ಡ ಹೊರೆಯನ್ನು ಹಾಕುತ್ತಿದೆ, 2014ರಲ್ಲಿ ಅಂತರಾಷ್ಟ್ರೀಯ ಕಚ್ಚಾತೈಲದ ಬೆಲೆ ಹೆಚ್ಚಾಗಿತ್ತು ಆಗ ಕಡಿಮೆ ಬೆಲೆಯಲ್ಲಿ ಪೆಟ್ರೋಲ್ ಡಿಸೇಲನ್ನು ಮಾರಾಟ ಮಾಡಲಾಗುತ್ತಿತ್ತು ಆದರೆ ಇದೀಗ ಅಂತರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾತೈಲದ ಬೆಲೆ ಕಡಿಮೆಯಿದ್ದರೂ ದಿನೇ ದಿನೇ ಪೆಟ್ರೋಲ್ ಡಿಸೇಲ್ ಬೆಲೆ ಏರಿಕೆ ಮಾಡಲಾಗುತ್ತಿದೆ.

ಕೂಡಲೇ ಕೇಂದ್ರ ಬಿಜೆಪಿ ಸರ್ಕಾರ ಜನವಿರೋಶಿ ನೀತಿಯನ್ನು ನಿಲ್ಲಿಸಬೇಕು. ಮತ್ತು ಬೆಲೆ ಏರಿಕೆ ಮಾಡಿರುವುದನ್ನು ಇಳಿಸಬೇಕು ಇಲ್ಲವಾದಲ್ಲಿ ಮೂಮದಿನ ದಿನಗಳಲ್ಲಿ ಜನಸಾಮಾನ್ಯರೊಡನೇ ಕಾಂಗ್ರೆಸ್ ಪಕ್ಷದಿಂದ ಉಗ್ರವಾದ ಜನಾಂದೋಲನವನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ನಂತರ ಕಾಂಗ್ರೆಸ್ ಮಾದಮ ವಕ್ತಾರ ಡಾ. ರಝಾಕ್ ಉಸ್ತಾದ್ ಮಾತನಾಡಿ, ಗ್ಯಾಸ್ ಸಿಲೆಂಡರ್ ಬೆಲೆಯನ್ನು ಏಕಾಏಕಿ ಏರಿಕೆ ಮಾಡುವ ಮೂಲಕ ಜನರ ಜೀವನವನ್ನು ಹಾಳು ಮಾಡಲು ಹೊರಟಿರುವ ಮೋದಿ ನೇತೃತ್ವದ ಕೇಂದ್ರ ಬಿಜೆಪಿ ಸರ್ಕಾರ ಅಸಮರ್ಥ ಸರ್ಕಾರವಾಗಿದ್ದು, ಬಿಜೆಪಿಗರಿಗೆ ಆಡಳಿತ ನಡೆಸುವ ನೈತಿಕತೆಯಿಲ್ಲ ಎಂದರು.

ಪ್ರತಿಭಟನೆಯಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಬಸವರಾಜ ಪಾಟೀಲ್ ಇಟಗಿ, ಪ್ರಮುಖರಾದ ಮಹ್ಮದ್ ಶಾಲಂ, ಬಶೀರುದ್ದೀನ್, ಕೆ.ಶಾಂತಪ್ಪ, ರುದ್ರಪ್ಪ ಅಂಗಡಿ, ಜಯಂತರಾವ್ ಪತಂಗೆ, ಅಬ್ದುಲ್ ಕರೀಂ, ಜಿ.,ಶಿವಮೂರ್ತಿ, ಪವನ್ ಕಿಶೋರ್ ಪಾಟೀಲ್, ಕೆ. ಅಸ್ಲಂ ಪಾಷಾ, ತಲಕಾಯಿ ಮಾರೆಪ್ಪ, ಅಮರೇಗೌಡ ಹಂಚಿನಾಳ, ಶ್ರೀದೇವಿ ನಾಯಕ, ರಾಣಿ ರಿಚರ್ಡ್, ಮಂಜುಳಾ, , ದಸ್ತಗಿರಿ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

### ಮಹಿಳಾ ಬಸ್ ಪ್ರಯಾಣಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ

## ರಾಜ್ಯನಿಧಿಯಿಂದ 1 ಸಾವಿರ, ಕೇಂದ್ರದ ಸಹಾಯದಿಂದ 4 ಸಾವಿರ ಬಸ್‌ಗಳ ಖರೀದಿ-ಬೈರತಿ ಸುರೇಶ್

■ ಕನ್ನಡ ಮಾತೃ ಭೂಮಿ ವಾರ್ತೆ



**ಬೆಂಗಳೂರು,ಜೂ.9**–ಕರ್ನಾಟಕ ಸರ್ಕಾರವು ಶಕ್ತಿ ಯೋಜನೆ ಯಡಿ ಮಹಿಳೆಯರಿಗೆ ಸ್ಮಾರ್ಟ್ ಕಾರ್ಡ್‌ಗಳನ್ನು ನೀಡಲು ನಿರ್ಧರಿಸಿದೆ. ಈ ಕಾರ್ಡ್‌ಗಳಿಂದಾಗಿ ಸರ್ಕಾರಿ ಬಸ್‌ಗಳಲ್ಲಿ ಹೆಚ್ಚು ಪರಿಣಾಮಕಾರಿಯಾಗಿ ಉಚಿತವಾಗಿ ಪ್ರಯಾಣಿಸಲು ಸಾಧ್ಯವಾಗುತ್ತದೆ ಎಂದು ಸಾರಿಗೆ ಸಚಿವೆ ಬೈರತಿ ಸುರೇಶ್ ಹೇಳಿದ್ದಾರೆ.

ರಾಜ್ಯದಲ್ಲಿ ಮೂರು ಕೋಟಿಗೂ ಹೆಚ್ಚು ಜನರು ಈ ಸ್ಮಾರ್ಟ್ ಕಾಡ್‌ಗಳನ್ನು ಪಡೆಯುವ ನಿರೀಕ್ಷೆಯಿದೆ ಎಂದು ಸಚಿವರು ಹೇಳಿದ್ದಾರೆ. ಮಹಿಳೆಯರು ಯಾವುದೇ ವೆಚ್ಚವಿಲ್ಲದೇ ಈ ಕಾಡ್‌ಗಳನ್ನು ಪಡೆದುಕೊಳ್ಳಬಹುದು. ಆದರೆ, ಪುರುಷರು ಮೆಟ್ರೋ ಕಾರ್ಡ್‌ನಂತೆ ಶುಲ್ಕವನ್ನು ಪಾವತಿಸುವ ಮೂಲಕ ಅವುಗಳನ್ನು ಪಡೆದುಕೊಳ್ಳಬಹುದು. ಈ ಕಾರ್ಡ್‌ಗಳಲ್ಲಿ ಹಣ ಖಾಲಿಯಾದ ತಕ್ಷಣ ರಿಚಾರ್ಜ್ ಮಾಡಬೇಕಾಗುತ್ತದೆ. ಸುಮಾರು ಮೂರು ಕೋಟಿ ಸ್ಮಾರ್ಟ್ ಕಾರ್ಡ್‌ಗಳನ್ನು ನೀಡಬೇಕಾಗಿರುವುದರಿಂದ, ಅವುಗಳ ಉತ್ಪಾದನೆಗೆ ಸರ್ಕಾರ ಟೆಂಡರ್‌ಗಳನ್ನು ಆಹ್ವಾನಿಸಲು ಯೋಜಿಸಿದೆ ಎಂದು ಸಚಿವರು ಹೇಳಿದ್ದಾರೆ. ಪೈಲಟ್ ಯೋಜನೆಯಡಿ ಶೀಘ್ರದಲ್ಲೇ ಸ್ಮಾರ್ಟ್ ಕಾರ್ಡ್ ವಿತರಣಾ ಪ್ರಕ್ರಿಯೆಯನ್ನು ಪ್ರಾರಂಭಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ಇದೇ ವೇಳೆ ಮಾಹಿತಿ ನೀಡಿದ್ದಾರೆ. ➘ 4

## ಮಾವಿನಕೆರೆ, ಓಪೆಕ್, ರಿಮ್ಸ್ ಸೇರಿದಂತೆವಿವಿಧಡೆ ಕೇಂದ್ರ ಜಂಟಿ ಕಾರ್ಯದರ್ಶಿ ಉಜ್ವಲ್ ಘೋಷ ಭೇಟಿ: ಪರಿಶೀಲನೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.10**–ನಗರದ ವಿವಿಧಡೆ ಕೇಂದ್ರ ವಾಣಿಜ್ಯ ಇಲಾಖೆ ಜಂಟಿ ಕಾರ್ಯದರ್ಶಿ ಹಾಗೂ ಮಹತ್ವಾಂಕ್ಷೆ ಜಿಲ್ಲೆಗಳ ಕೇಂದ್ರ ಪ್ರಭಾರಿ ಅಧಿಕಾರಿ ಉಜ್ವಲಕುಮಾರ ಘೋಷ ಇವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಗರದ ಮಧ್ಯಭಾಗದಲ್ಲಿರುವ ಮಾವಿನಕೆರೆ ಅಭಿವೃದ್ದಿಕಾಮಗಾರಿಯನ್ನು ಪರಿಶೀಲಿಸಿದ ಅವರು ಮಾವಿನ ಕೆರೆ ಅಭಿವೃದ್ದಿಗೆಕೈಗೊಂಡಿರುವ ಕಾಮಗಾರಿ, ಬಾಕಿ ಕಾಮಗಾರಿ ಹಾಗೂ ಕೆರೆಯ ಮಧ್ಯಭಾಗದಲ್ಲಿ ಖಾಸಗಿ ವ್ಯಕ್ತಿಗಳ ಜಮೀನು ಇರುವ ಕುರಿತು ಮಹಾನಗರ ಪಾಲಿಕೆ ಆಯುಕ್ತ ಜೋಬಿನ್ ಮಹೋಪಾತ್ರರಿಂದ ಮಾಹಿತಿ ಪಡೆದರು. ಮಾವಿನ ಕೆರೆಗೆ ನಗರದ ಚರಂಡಿ ನೀರು ಸೇರದಂತೆ ಎಚ್ಚರವಹಿಸಲು ಸೂಚನೆ ನೀಡಿದರು.

ರಿಮ್ಸ್ ಮತ್ತು ಓಪೆಕ್ ಆಸ್ಪತ್ರೆಗೆ ಭೇಟಿ ನೀಡಿ ರೋಗಿಗಳೊಂದಿಗೆ ಸಮಾಲೋಚನೆ ನಡೆಸಿ ಆಸ್ಪತ್ರೆಯಲ್ಲಿ ದೊರೆಯುತ್ತಿರುವ ಸೌಲಭ್ಯಗಳ ತಲುಪಿರುವಕುರಿತು ➘ 4

## ಜೂ.11 ರಂದು ಸಿರವಾರದಲ್ಲಿ ಚುಕ್ಕಿ ಪ್ರತಿಷ್ಠಾನದಿಂದ 50 ನೇ ವರ್ಷ ಪುಣ್ಯಾರಾಧನೆ, ಬಸವ ತತ್ವ ಚಿಂತನಾ ಗೋಷ್ಟಿ-ಚುಕ್ಕಿ ಸೂಗಪ್ಪ ಸಾಹುಕಾರ



■ ಕನ್ನಡ ಮಾತೃ ಭೂಮಿ ವಾರ್ತೆ


**ರಾಯಚೂರು,ಜೂ.9**–ಚುಕ್ಕಿ ಪ್ರತಿಷ್ಠಾನ ಸಿರವಾರವತಿಯಿಂದ ಉಮಾಪತಿ ಚುಕ್ಕಿಯವರ 50ನೇ ವರ್ಷ ಸುವರ್ಣ ಸ್ಮರಣೋತ್ಸವ ಹಾಗೂ ಬಸವ ತತ್ವ ಚಿಂತನಾಗೋಷ್ಟಿಯನ್ನು ಜೂ.11 ರಂದು ಸಿರವಾರದ ಚುಕ್ಕಿ ರುದ್ರಮ್ಮ ಉಮಾಪತೆಪ್ಪ ಕಲ್ಯಾಣ ಮಂಟಪದಲ್ಲಿ ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆವರೆಗೆ ಆಯೋಜಿಸಲಾಗಿದೆ ಎಂದು ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷ ಚುಕ್ಕಿ ಸೂಗಪ್ಪ ಹೇಳಿದರು.

ಅವರಿಂದು ಮಾಧ್ಯಮಗೋಷ್ಠಿ ಉದ್ದೇಶಿಸಿ ಮಾತನಾಡಿ, ಅಂದುಬೆಳಿಗ್ಗೆ 8.30ಕ್ಕೆ ಶ್ರೀ ಬಸವವಾದಿಶರಣರ ಪೂಜೆ ನಂತರ ದಾವಣೆಗೆರೆ ಬಸವ ಕಲಾ ಬಳಗದಿಂದ ವಚನ ಭಜನೆಯೊಂದಿಗೆ ಶ್ರೀ ವಿಶ್ವಗುರು ಬಸವಣ್ಣನವರ ಭಾವಚಿತ್ರ ಮೆರವಣಿಗಗೆ ನಡೆಯಲಿದೆ. ಬೆಳಿಗ್ಗೆ 9.30ಕ್ಕೆ ಷಟಸ್ಥಲ ದ್ವಜಾರೋಹಣನೇರವೆರುತ್ತದೆ. ನಂತರ ಶರಣಪ್ಪ ಗೋನಾಳ ತಂಡದಿಂದ ವಚನಗಾಯನ ನಡೆಯಲಿದೆ.

ಬೆಳಿಗ್ಗೆ 10.30ಕ್ಕೆ ಬಸವತತ್ವ ಚಿಂತನಾ ಗೋಷ್ಟಿ ನಡೆಯಲಿದ್ದು ವಿಷಪೂರಿತ ಸನ್ನಿವೇಶದಲ್ಲಿ ಬಸವತತ್ವ ಅವಶ್ಯಕತೆ, ಬಸವತತ್ವ ಮುಟ್ಟಿಸುವಲ್ಲಿ ಸಫಲತೆ, ವಿಫಲತೆ ಮುಂದಿನ ನಡೆಯ ಕುರಿತು ➘ 4

## ಮಟಮಾರಿ ಶ್ರೀ ವೀರಭದ್ರೇಶ್ವರ ಏತ ನೀರಾವರಿ ಯೋಜನೆ ಸರ್ಕಾರ ಅಸ್ತು: ಗ್ರಾಮಸ್ಥರಿಂದ ಗ್ರಾಮೀಣ ಶಾಸಕರಿಗೆ ಅಭಿನಂದನೆ

■ ಕನ್ನಡ ಮಾತೃ ಭೂಮಿ ವಾರ್ತೆ




**ರಾಯಚೂರು,ಜೂ.9**–ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಪ್ರೊ.ಬಿ.ಕೃಷ್ಣಪ್ಪ ಅವರ 88ನೇ ಜನ್ಮದಿನವನ್ನು ಶೋಷಿತ ಸಮುದಾಯ ಐಕ್ಯತಾ ದಿನವನ್ನಾಗಿ ಆಚರಣೆ ಮಾಡಲಾಯಿತು.

ನಗರದ ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಬಳಿಕ ಪ್ರೊ.ಬಿ.ಕೃಷ್ಣಪ್ಪ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಜನ್ಮದಿನವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕಲಬುರ್ಗಿ ಸಂಘಟನಾ ಸಂಚಾಲಕ ಚೆನ್ನಪ್ಪ ಹೆಡಗಿನಾಳ, ಜಿಲ್ಲಾಧ್ಯಕ್ಷ ಜೆ.ಕೆ.ಆಂಜನೇಯ, ಮಂಜು ಗೊಡಿಹಾಳ, ಗೋವಿಂದ ಗಟ್ಟು, ಜಾನ್‌ರಾಜ್, ಬಸವರಾಜ, ಸಂಗಮೇಶ, ಸಹದೇವ್, ಭಾಸ್ಕರ್ ಸೇರಿದಂತೆ ಅನೇಕರು ಇದ್ದರು.

# ಕನ್ನಡ ಭವನದಲ್ಲಿ ಸಾಂಸ್ಕೃತಿಕ ಸಡಗರ ಸಂಗೀತ, ನೃತ್ಯ ಹಾಗೂ ನಾಟಕ ಪ್ರದರ್ಶನ




■ ಕನ್ನಡ ಮಾತೃ ಭೂಮಿ ವಾರ್ತೆ

ರಾಯಚೂರು, ರಂಗಸಂಗಮ ಸಾಂಸ್ಕೃತಿಕ ಸೇವಾ ಸಂಘ, ರಾಯಚೂರು ಹಾಗೂ Kannada and Culture Department ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಜೂನ್ 5ರಂದು ನಗರದ ಕನ್ನಡ ಭವನದಲ್ಲಿ ಸಾಂಸ್ಕೃತಿಕ ಸಡಗರ ಕಾರ್ಯಕ್ರಮವು ಸಂಗೀತ, ನೃತ್ಯ ಮತ್ತು ನಾಟಕ ಪ್ರದರ್ಶನಗಳೊಂದಿಗೆ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮವನ್ನು ಹಿರಿಯ ರಂಗಭೂಮಿ ಕಲಾವಿದ ಬಿ.ಎಚ್. ಗುಂಡಳ್ಳಿ ಉದ್ಘಾಟಿಸಿ ಮಾತನಾಡಿ, ರಂಗಸಂಗಮ ಸಾಂಸ್ಕೃತಿಕ ಸೇವಾ ಸಂಘದ ಅಧ್ಯಕ್ಷ ವೆಂಕಟ ನರಸಿಂಹಲು ಅವರು ಹಲವು ವರ್ಷಗಳಿಂದ ರಂಗಭೂಮಿ ಕ್ಷೇತ್ರದಲ್ಲಿ ಸಾಮಾಜಿಕ, ಐತಿಹಾಸಿಕ ಹಾಗೂ ಪೌರಾಣಿಕ ನಾಟಕಗಳಲ್ಲಿ ವಿವಿಧ ಪಾತ್ರಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುತ್ತಾ ಕಲಾಸೇವೆಯಲ್ಲಿ ತೊಡಗಿಕೊಂಡಿದ್ದಾರೆ ಎಂದು ಪ್ರಶಂಸಿಸಿದರು. ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಇನ್ನಷ್ಟು ಹೆಚ್ಚಾಗಿ ನಡೆಯಲಿ, ಕಲಾವಿದರಿಗೆ ತಮ್ಮ ಸಂಪೂರ್ಣ ಬೆಂಬಲವಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕರ್ನಾಟಕ ನಾಟಕ ಅಕಾಡೆಮಿಯ ಮಾಜಿ ಸದಸ್ಯೆ ಶಾಂತ ಕುಲಕರ್ಣಿ ಮಾತನಾಡಿ, ಪ್ರತಿಯೊಬ್ಬರೂ ಸಂಗೀತ, ನೃತ್ಯ, ನಾಟಕ, ಯಕ್ಷಗಾನ ಹಾಗೂ ಬಯಲಾಟದಂತಹ ಕಲಾಪ್ರಕಾರಗಳನ್ನು ಆಸ್ವಾದಿಸುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದರು. ಇಂತಹ ಕಾರ್ಯಕ್ರಮಗಳು ಮನಸ್ಸಿಗೆ ಉಲ್ಲಾಸ, ಉತ್ಸಾಹ ಮತ್ತು ನೆಮ್ಮದಿಯನ್ನು ನೀಡುತ್ತವೆ ಎಂದು ಹೇಳಿದರು.

ಸೂರ್ಯೋದಯ ವಾಕಿಂಗ್ ಕ್ಲಬ್ ಅಧ್ಯಕ್ಷ ಬಿ. ಬಸವರಾಜ್ ಮಾತನಾಡಿ, ರಾಯಚೂರಿನಲ್ಲಿ ಸಾಕಷ್ಟು ಪ್ರತಿಭಾವಂತ ಕಲಾವಿದರಿದ್ದಾರೆ. ಅವರನ್ನು ಒಂದೇ ವೇದಿಕೆಯಲ್ಲಿ ಸೇರಿಸಿ ಕಾರ್ಯಕ್ರಮ ಆಯೋಜಿಸುವುದು ಸುಲಭದ ಕೆಲಸವಲ್ಲ. ಇಂತಹ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸುತ್ತಿರುವುದು ಶ್ಲಾಘ ಀಯ ಕಾರ್ಯ ಎಂದು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿಯಾಗಿದ್ದ ವೀರೇಂದ್ರ ಪಾಟೀಲ್ ಹರಿವಿ ಮಾತನಾಡಿ, ಸಾಂಸ್ಕೃತಿಕ ಕಾರ್ಯಕ್ರಮಗಳ ಬೆಳವಣಿಗೆಗೆ ಸಾರ್ವಜನಿಕರ ಪ್ರೋತ್ಸಾಹ ಅತ್ಯಗತ್ಯ. ವೆಂಕಟ ನರಸಿಂಹಲು ಯಾವುದೇ ಪಾತ್ರವನ್ನಾದರೂ ಸಮರ್ಥವಾಗಿ ನಿರ್ವಹಿಸುವ ಸಕಲಕಲಾ ವಲ್ಲಭ ಕಲಾವಿದರಾಗಿದ್ದು, ಅವರ ನೇತೃತ್ವದಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮ ಸಂತಸ ತಂದಿದೆ ಎಂದು ಹೇಳಿದರು.

ಆರೋಗ್ಯ ಇಲಾಖೆಯ ನಾಗರಾಜ್ ಜಗದಪ್ ಮಾತನಾಡಿ, ಮಾನವನಿಗೆ ಆಮ್ಲಜನಕ ಎಷ್ಟು ಮುಖ್ಯವೋ, ಕಲಾವಿದರಿಗೆ ತನು, ಮನ ಮತ್ತು ಧನದ ಬೆಂಬಲ ಅಷ್ಟೇ ಮುಖ್ಯವಾಗಿದೆ. ಸಮಾಜವು ಕಲಾವಿದರನ್ನು ಪ್ರೋತ್ಸಾಹಿಸಿ ಬೆಳೆಸಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ರಂಗಭೂಮಿ ಕಲಾವಿದ ವಿ.ಎನ್. ಅಕ್ಕಿ ಮಾತನಾಡಿ, ವೆಂಕಟ ನರಸಿಂಹಲು ಹಲವು ವರ್ಷಗಳಿಂದ ರಂಗಭೂಮಿ ಚಟುವಟಿಕೆಗಳಲ್ಲಿ ಸಕ್ರಿಯರಾಗಿದ್ದು, ಕಲಾಸೇವೆಯನ್ನು ನಿರಂತರವಾಗಿ ಮುಂದುವರಿಸಿಕೊಂಡು ಬಂದಿದ್ದಾರೆ. ಇಂತಹ ಕಾರ್ಯಕ್ರಮಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಕಲಾಭಿಮಾನಿಗಳು ಆಗಮಿಸಿ ಪ್ರೋತ್ಸಾಹ ನೀಡಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಹಿರಿಯ ಕಲಾವಿದ ಪಂಪಾಪತಿ ಹೂರ್ಗಾ, ಹಿರಿಯ ರಂಗಭೂ ಮಿ ಕಲಾವಿದ ಅಣ್ಣಿ ವೀರಯ್ಯಸ್ವಾಮಿ, ಚಂದ್ರಶೇಖರ್ ನೆಲಹಾಳ್, ಮಾಜಿ ನಗರಸಭಾ ಸದಸ್ಯ ವಿ. ಗೋವಿಂದು ಹಾಗೂ ರಂಗಸಂಗಮ ಸಾಂಸ್ಕೃತಿಕ ಸೇವಾ ಸಂಘದ ಅಧ್ಯಕ್ಷ ವೆಂಕಟ ನರಸಿಂಹಲು ಸೇರಿದಂತೆ ಹಲವರು ಉಪಸ್ಥಿತರಿದ್ದರು.ನಂತರ ನಡೆದ ಸಾಂಸ್ಕೃತಿಕ ಕಾರ್ಯ ಕ್ರಮದಲ್ಲಿ ಸಂಗೀತ ಮತ್ತು ನೃತ್ಯ ಪ್ರದರ್ಶ ನಗಳು ಪ್ರೇಕ್ಷಕರ ಮನಸೆಳೆಯುವಂತೆ ನಡೆದವು.

ಅಲ್ಲದೆ ಲಕ್ಷ್ಮಣ ಮಂಡಲಗೇರ ಮತ್ತು ತಂಡದವರಿಂದ ಪ್ರದರ್ಶಿಸಲಾದ ಹಾಸ್ಯ ನಾಟಕ ಮೂರ್ಖ ದೊರೆ ಪ್ರೇಕ್ಷಕರಿಂದ ಉತ್ತಮ ಮೆಚ್ಚುಗೆ ಗಳಿಸಿ ಕಾರ್ಯ ಕ್ರಮಕ್ಕೆ ವಿಶೇಷ ಮೆರುಗು ನೀಡಿತು. ಒಟ್ಟಾರೆಯಾಗಿ ಸಂಗೀತ, ನೃತ್ಯ ಮತ್ತು ನಾಟಕಗಳ ಸಂಗಮವಾಗಿ ಮೂಡಿಬಂದ ಸಾಂಸ್ಕೃತಿಕ ಸಡಗರ ಕಾರ್ಯಕ್ರಮವು ಕಲಾಭಿಮಾನಿಗಳ ಮನಗೆದ್ದು ಯಶಸ್ವಿಯಾಗಿ ಸಂಪನ್ನವಾಯಿತು.

# ರೈಲ್ವೆ ಸಚಿವ ಸೋಮಣ್ಣ ಭೇಟಿ ಮಾಡಿದ ರಾಯಚೂರು ಜಿಲ್ಲಾ ವಾಣಿಜ್ಯೋದ್ಯಮ ಸಂಘ: ರೈಲು ನಿಲ್ದಾಣ ಅಭಿವೃದ್ಧಿಗೆ ಮನವಿ

■ ಕನ್ನಡ ಮಾತೃ ಭೂಮಿ ವಾರ್ತೆ

ರಾಯಚೂರು, ರಾಯಚೂರು ಜಿಲ್ಲಾ ವಾಣಿಜ್ಯೋದ್ಯಮ ಸಂಘದ ಪದಾಽಕಾರಿಗಳು ತುಮಕೂರಿನಲ್ಲಿ ನಡೆದ ವಾಣಿಜ್ಯೋದ್ಯಮಿಗಳ ರಾಜ್ಯಮಟ್ಟದ ಸಮ್ಮೇಳನದಲ್ಲಿ ಕೇಂದ್ರ ರೈಲ್ವೆ ಸಚಿವ ಸೋಮಣ್ಣ ಅವರನ್ನು ಭೇಟಿ ಮಾಡಿ ರಾಯಚೂರು ರೈಲು ನಿಲ್ದಾಣದ ಅಭಿವೃದ್ಧಿ ಹಾಗೂ ಪ್ರಯಾಣಿಕರ ಸೌಲಭ್ಯಗಳಿಗೆ ಸಂಬಂಽಸಿದ ಹಲವು ಪ್ರಮುಖ ಬೇಡಿಕೆಗಳ ಕುರಿತು ಮನವಿ ಸಲ್ಲಿಸಿದರು.

ತುಮಕೂರಿನ ಖ್ಟಜಿ ಎಚ್ಲಜಚಿಥಜಚ್ಟಚಿಢಥಚಿ ಖಟಿ ಇಟ್ಟಜಿಚ್ಷ ಏಚ್ಟ ನಲ್ಲಿ ಜೂನ್ 6ರಂದು ಆಯೋಜಿಸಲಾದ ರಾಜ್ಯಮಟ್ಟದ ವಾಣಿಜ್ಯೋದ್ಯಮಿಗಳ ಸಮ್ಮೇಳನದಲ್ಲಿ ಸಂಘದ ಅಧ್ಯಕ್ಷ ಎಸ್. ಕಮಲ್ ಕುರ್ಮಾ, ನಿಕಟಪೂರ್ವ ಅಧ್ಯಕ್ಷ ತ್ರಿವಿಕ್ರಮ್ ಜೋಶಿ, ಕಾರ್ಯದರ್ಶಿ ವೈ. ಜಂಬಣ್ಣ, ಕಾರ್ಯಕಾರಿ ಸದಸ್ಯರಾದ ಉದಯ್ ಕಿರಣ್ ಹಾಗೂ ಬಿ. ಮೋಹನ್ ಅವರು ಭಾಗವಹಿಸಿ ಸಚಿವರನ್ನು ಭೇಟಿಯಾದರು.

ಈ ಸಂದರ್ಭದಲ್ಲಿ ರಾಯಚೂರು ಜಿಲ್ಲೆಯ ವ್ಯಾಪಾರಿಗಳು ಹಾಗೂ ರೈಲ್ವೆ ಪ್ರಯಾಣಿಕರು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಸಚಿವರ ಗಮನ ಸೆಳೆಯಲಾಯಿತು.

ಪ್ರಮುಖವಾಗಿ ಸ್ಟೇಷನ್ ರಸ್ತೆಯಲ್ಲಿರುವ ಯರಮರಸ್ ಗೂಡ್ಸ್ ಶೆಡ್‌ನ್ನು ಬೇರೆ ಸ್ಥಳಕ್ಕೆ ಸ್ಥಳಾಂತರಿ ಸುವಂತೆ ಮನವಿ ಮಾಡಲಾಯಿತು. ಗೂಡ್ಸ್ ಶೆಡ್‌ನಿಂದ ಸಂಚಾರ ದಟ್ಟಣೆ ಹಾಗೂ ಸಾರ್ವಜನಿಕರಿಗೆ ಉಂಟಾಗು ತ್ತಿರುವ ತೊಂದರೆಗಳನ್ನು ಸಚಿವರ ಗಮನಕ್ಕೆ ತರಲಾಯಿತು.

ಇದೇ ವೇಳೆ ರಾಯಚೂರು ರೈಲು ನಿಲ್ದಾಣದ ಪ್ಲಾಟ್‌ಫಾರ್ಮ್-2ರಲ್ಲಿ ಪ್ರಯಾಣಿಕರಿಗೆ ಅಗತ್ಯ ಮೂಲಭೂತ ಸೌಲಭ್ಯಗಳ ಕೊರತೆ ಇರುವುದನ್ನು ವಿವರಿಸಲಾಯಿತು. ಅಳವಡಿಸಲಾಗಿರುವ ಲಿಫ್ಟ್‌ಗಳು ಕಾರ್ಯನಿರ್ವಹಿಸದಿರುವುದು ಹಾಗೂ ಎಸ್ಕಲೇಟರ್ ಕಾಮಗಾರಿಯು ಅತ್ಯಂತ ನಿಧಾನಗತಿಯಲ್ಲಿ ಸಾಗುತ್ತಿರುವುದರಿಂದ ಪ್ರಯಾಣಿಕರಿಗೆ ತೊಂದರೆಯಾ ಗುತ್ತಿದೆ ಎಂದು ತಿಳಿಸಲಾಯಿತು. ವಿಶೇಷ ವಾಗಿ ಹಿರಿಯ ನಾಗರಿಕರು, ಮಹಿಳೆಯರು ಹಾಗೂ ದಿವ್ಯಾಂಗರ ಅನುಕೂಲಕ್ಕಾಗಿ ಅಗತ್ಯ ಸೌಲಭ್ಯಗಳನ್ನು ತಕ್ಷಣ ಒದಗಿಸುವಂತೆ ಒತ್ತಾಯಿಸಲಾಯಿತು.

ಹಿರಿಯ ನಾಗರಿಕರು ಮತ್ತು ಅಶಕ್ತ ಪ್ರಯಾಣಿಕರ ಅನುಕೂಲಕ್ಕಾಗಿ ಬ್ಯಾಟರಿ ಕಾರ್ ಸೇವೆಯನ್ನು ಪ್ರಾರಂಭಿಸುವಂತೆ ಮನವಿ ಸಲ್ಲಿಸಲಾಯಿತು. ಇದರಿಂದ ದೂರದ ಪ್ಲಾಟ್‌ಫಾರ್ಮ್‌ಗಳಿಗೆ ತೆರಳುವ ಪ್ರಯಾಣಿಕರಿಗೆ ಹೆಚ್ಚಿನ ನೆರವಾಗಲಿದೆ ಎಂದು ಸಂಘದ ಪದಾಽಕಾರಿಗಳು ತಿಳಿಸಿದರು.

ಅಮೃತ ಭಾರತ್ ಯೋಜನೆಯಡಿ ರಾಯಚೂರು ರೈಲು ನಿಲ್ದಾಣದಲ್ಲಿ ನಡೆಯುತ್ತಿರುವ ನವೀಕರಣ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ ಪ್ರಯಾಣಿಕರ ಬಳಕೆಗೆ ಮುಕ್ತಗೊಳಿ ಸಬೇಕೆಂದು ಒತ್ತಾಯಿಸಲಾಯಿತು. ಕಾಮಗಾರಿಗಳ ವಿಳಂಬದಿಂದ ಸಾರ್ವಜನಿ ಕರಿಗೆ ಅನಾನುಕೂಲ ಉಂಟಾಗುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾ ಯಿತು.

ರೈಲು ಸೇವೆಗಳ ವಿಸ್ತರಣೆಗೆ ಸಂಬಂಽಸಿದಂತೆ ರೈಲು ಸಂಖ್ಯೆ 12861/12862 ವಿಜಯವಾಡಮಹಬೂಬ್‌ನಗರ ರೈಲನ್ನು ರಾಯಚೂರುವರೆಗೆ ವಿಸ್ತರಿಸುವಂತೆ ಬೇಡಿಕೆ ಸಲ್ಲಿಸಲಾಯಿತು.

ಈ ಕ್ರಮದಿಂದ ಜಿಲ್ಲೆಯ ಪ್ರಯಾಣಿಕರಿಗೆ ಹೆಚ್ಚಿನ ಅನುಕೂ ಲವಾಗಲಿದೆ ಎಂದು ತಿಳಿಸಲಾಯಿತು.

ಅಲ್ಲದೆ, ನಾಂದೇಡ್ ಎಕ್ಸ್‌ಪ್ರೆಸ್ ರೈಲಿನ ನಿರ್ಗಮನ ಸ್ಥಳವನ್ನು ಬದಲಾಯಿಸದೆ ಕೆಎಸ್‌ಆರ್ ಬೆಂಗಳೂರು ನಿಲ್ದಾಣದಿಂದಲೇ ಮುಂದುವರಿಸಬೇಕು ಹಾಗೂ ಈಗಿರುವ ವೇಳಾಪಟ್ಟಿಯನ್ನು ಕಾಯ್ದುಕೊಳ್ಳಬೇಕು ಎಂದು ಮನವಿ ಮಾಡಲಾಯಿತು. ರೈಲು ಆಗಾಗ ತಡವಾಗಿ ಸಂಚರಿಸುತ್ತಿರುವುದರಿಂದ ಪ್ರಯಾಣಿಕರು ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ಸಂಘದ ಪದಾಽಕಾರಿಗಳು ಸಚಿವರ ಗಮನಕ್ಕೆ ತಂದರು.

ಮನವಿಯನ್ನು ಸ್ವೀಕರಿಸಿದ ರೈಲ್ವೆ ಸಚಿವ ಸೋಮಣ್ಣ ಅವರು ಎಲ್ಲಾ ವಿಷಯಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು ಎಂದು ರಾಯಚೂರು ಜಿಲ್ಲಾ ವಾಣಿಜ್ಯೋದ್ಯಮ ಸಂಘದ ಕಾರ್ಯದರ್ಶಿ ವೈ. ಜಂಬಣ್ಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೈಸೂರು ನಗರ ವ್ಯಾಪ್ತಿಯಲ್ಲಿ 458 ಕೋಟಿ, ಜಿಲ್ಲೆಯಲ್ಲಿ 184 ಕೋಟಿ ರೂ.ದಂಡ ವಸೂಲಿ ಬಾಕಿ




**ಮೈಸೂರು,ಜೂ.9-**ಸಂಚಾರ ನಿಯಮ ಉಲ್ಲಂಘನೆ ಸಂಬಂಧ ಮೈಸೂರು ನಗರ ವ್ಯಾಪ್ತಿಯಲ್ಲಿ 458 ಕೋಟಿ ರೂ. ಹಾಗೂ ಜಿಲ್ಲೆಯಲ್ಲಿ 184 ಕೋಟಿ ರೂ. ದಂಡ ವಸೂಲಿ ಬಾಕಿ ಇದ್ದು, ಸರ್ಕಾರ ಜೂ.21 ರಿಂದ ಜು.10ರವರೆಗೆ ದಂಡ ಪಾವತಿಗೆ ಶೇ.50ರಷ್ಟು ರಿಯಾಯಿತಿ ನೀಡಿರುವ ಬಗ್ಗೆ ವ್ಯಾಪಕ ಪ್ರಚಾರದೊಂದಿಗೆ ದಂಡದ ಬಾಕಿ ಮೊತ್ತ ವಸೂಲಿಗೆ ಕ್ರಮ ವಹಿಸುವಂತೆ ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖಾಧಿಕಾರಿಗಳಿಗೆ ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಉಷಾರಾಣಿ ನಿರ್ದೇಶನ ನೀಡಿದ್ದಾರೆ.

ಶೇ.50 ರಿಯಾಯಿತಿ ನೀಡುವ ಕುರಿತು ರಾಜ್ಯ ಸರ್ಕಾರದಿಂದ ಅಧಿಸೂಚನೆ: ಸಂಚಾರ ನಿಯಮ ಉಲ್ಲಂಘನೆ ಮತ್ತು ಸಾರಿಗೆ ಇಲಾಖೆ ಸಂಬಂಧ ದಂಡ ಪಾವತಿಗೆ ಶೇ.50ರಷ್ಟು ರಿಯಾಯಿತಿಯನ್ನು ಸರ್ಕಾರ ನೀಡಿದೆ. ಮೇ 2026ರ ಮೊದಲು ದಾಖಲಾಗಿರುವ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ಹಾಗೂ 1991ರಿಂದ 2022ರ ಅವಧಿಯಲ್ಲಿ ಸಾರಿಗೆ ಇಲಾಖೆಯಲ್ಲಿ ದಾಖಲಾಗಿರುವ ಪ್ರಕರಣಗಳಿಗೆ ದಂಡದಲ್ಲಿ ಶೇ.50 ರಿಯಾಯಿತಿ ನೀಡುವ ಕುರಿತು ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ.

ತಾಲೂಕು ಅಧಿಕಾರಿಗಳು ಪ್ರತ್ಯೇಕ ಸಭೆ ನಡೆಸಿ ಯೋಜನೆ ರೂಪಿಸುವಂತೆ ಸೂಚನೆ: ರಿಯಾಯಿತಿಯಡಿ ದಂಡ ಪಾವತಿಗೆ ಸ್ಥಾಪಿಸಿರುವ ಬೂತ್‌ಗಳ ಬಗ್ಗೆ ಪ್ರಚಾರ ನೀಡಬೇಕು. ಆ ಮೂಲಕ ಹೆಚ್ಚಿನ ಸಂಖ್ಯೆ ಯಲ್ಲಿ ಪ್ರಕರಣಗಳನ್ನು ಮುಕ್ತಾಯಗೊಳಿಸಬಹುದು. ಹಾಗೆಯೇ ತಾಲೂಕು ಅಧಿಕಾರಿಗಳು ಪ್ರತ್ಯೇಕ ಸಭೆ ನಡೆಸಿ ಕ್ರಿಯಾ ಯೋಜನೆ ರೂಪಿಸುವಂತೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಬಾಕಿ ಇರುವ ಪ್ರಕರಣ ವಿವರ: ಮೈಸೂರು ನಗರ ಸೇರಿದಂತೆ ಜಿಲ್ಲೆಯಲ್ಲಿ ಸಂಚಾರ ನಿಯಮ ಉಲ್ಲಂಘನೆ ಸಂಬಂಧ ವಾಹನ ಸವಾರರಿಂದ 642 ಕೋಟಿ ರೂ. ದಂಡ ವಸೂಲಿಯಾಗಬೇಕಿದೆ. ಮೈಸೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ 1.4 ಕೋಟಿ ಪ್ರಕರಣಗಳಿದ್ದು, 458 ಕೋಟಿ ರೂ. ದಂಡ ಪಾವತಿಯಾಗಬೇಕಿದೆ. ಮೈಸೂರು ಜಿಲ್ಲಾ ಪೊಲೀಸ್ ವ್ಯಾಪ್ತಿಯಲ್ಲಿ 36.73 ಲಕ್ಷ ಪ್ರಕರಣಗಳಿಂದ 184 ಕೋಟಿ ರೂ. ದಂಡ ವಸೂಲಿಯಾಗಬೇಕಿದೆ

ಈ ಹಿಂದೆ 77 ಲಕ್ಷ ಪ್ರಕರಣಗಳನ್ನು ಇತ್ಯರ್ಥಪಡಿಸಿ 210 ಕೋಟಿ ರೂ. ಸರಕಾರಕ್ಕೆ ಆದಾಯ ಬಂದಿದೆ. ನಾಗರಿಕರು ಈ ಯೋಜನೆಯ ಪ್ರಯೋಜನ ಪಡೆದುಕೊಳ್ಳಬೇಕು. ರಾಜ್ಯದಲ್ಲಿ ಬಾಕಿ ದಂಡ ವಸೂಲಿಯಲ್ಲಿ 2ನೇ ಸ್ಥಾನದಲ್ಲಿರುವ ಮೈಸೂರು ಜಿಲ್ಲೆಯನ್ನು ಮೊದಲ ಸ್ಥಾನಕ್ಕೆ ತರುವ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸಬೇಕಿದ್ದು, ಮೈಸೂರಿನ ಜಿಲ್ಲಾ ನ್ಯಾಯಾಲಯಗಳ ಆವರಣದಲ್ಲಿ ಬಾಕಿ ದಂಡ ಪಾವತಿ ವಸೂಲಿ ಕೇಂದ್ರ ಆರಂಭಿಸಿ ಎಂದು ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಉಷಾರಾಣಿ ನಿರ್ದೇಶನ ನೀಡಿದ್ದಾರೆ.

# ಕಾಂಗ್ರೆಸ್ ಮುಖಂಡ ಸೂರಜ್ ಹೆಗ್ಡೆಗೆ ಸರ್ಕಾರಿ ಗೌರವಗಳೊಂದಿಗೆ ಅಂತಿಮ ವಿದಾಯ-ರಾಹುಲ್ ಗಾಂಧಿ ಅಂತಿಮ ನಮನ



**ಬೆಂಗಳೂರು,ಜೂ.9-**ಎಐಸಿಸಿ ಕಾರ್ಯದರ್ಶಿ, ರಾಜ್ಯ ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಸೂರಜ್ ಹೆಗ್ಡೆ ಅವರಿಗೆ ಮಂಗಳವಾರ ಸರ್ಕಾರಿ ಗೌರವಗಳೊಂದಿಗೆ ಭಾವಪೂರ್ಣ ಅಂತಿಮ ವಿದಾಯ ಸಲ್ಲಿಸಲಾಯಿತು.

ನಗರದ ಎಂ.ಎಸ್.ರಾಮಯ್ಯ ಆಸ್ಪತ್ರೆಯಲ್ಲಿ ಭಾನುವಾರ ರಾತ್ರಿ ತೀವ್ರ ಹೃದಯಾಘಾತದಿಂದ ನಿಧನರಾದ ಎಐಸಿಸಿ ಪ್ರಧಾನ ಕಾರ್ಯದರ್ಶಿ ಸೂರಜ್ ಹೆಗ್ಡೆ ಅವರಿಗೆ ಲೋಕಸಭೆ ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ,

ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೆವಾಲ, ಸಿಎಂ ಡಿ.ಕೆ. ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್, ಮಾಜಿ ಸಿಎಂ, ಸಿಡಬ್ಲ್ಯೂಸಿ ಸದಸ್ಯರಾದ ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಇಂದು ನಗರದ ಬಿಇಎಲ್ ರಸ್ತೆ ನಿವಾಸದಲ್ಲಿ ಸೂರಜ್ ಹೆಗ್ಡೆ ಅವರಿಗೆ ಅಂತಿಮ ನಮನ ಸಲ್ಲಿಸಿದರು.

ರಾಹುಲ್ ಗಾಂಧಿ ಅವರು ಸೂರಜ್ ಹೆಗಡೆ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು, ಪುಷ್ಪ ನಮನ ಸಲ್ಲಿಸಿದರು.

ಸೂರಜ್ ಹೆಗ್ಡೆ ಅವರ ಪತ್ನಿ ಶಿಲ್ಪಾ, ಪುತ್ರರಾದ ಸಮೃದ್, ವಿಶ್ರುತ್ ಹಾಗೂ ಕುಟುಂಬ ಸದಸ್ಯರಿಗೆ ರಾಹುಲ್ ಗಾಂಧಿ ಸೇರಿದಂತೆ ಕಾಂಗ್ರೆಸ್ ಮುಖಂಡರು ಸಾಂತ್ವನ ಹೇಳಿ, ಧೈರ್ಯ ತುಂಬಿದರು. ನಂತರ ಸೂರಜ್ ಹೆಗ್ಡೆ ಅವರ ನಿವಾಸದ ಬಳಿಯೇ ಸಕಲ ಸರ್ಕಾರಿ ಗೌರವವನ್ನು ಅರ್ಪಿಸಲಾಯಿತು.

ಗಾಳಿಯಲ್ಲಿ ಮೂರು ಸುತ್ತು ಗುಂಡು ಹಾರಿಸಿ ಪೊಲೀಸ್ ಬಂದೂಕು ಪಡೆ ಗೌರವ ಸಲ್ಲಿಸಿತು. ಬಳಿಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸೂರಜ್ ಅವರ ಪತ್ನಿ ಶಿಲ್ಪಾ ಅವರಿಗೆ ರಾಷ್ಟ್ರಧ್ವಜ ಹಸ್ತಾಂತರಿಸಿದರು.

ಬಿಕ್ಕಿ, ಬಿಕ್ಕಿ ಅಳುತ್ತಿದ್ದ ಅವರಿಗೆ ಸಾಂತ್ವನ ಹೇಳಿದರು. ಧ್ವಜ ಹಸ್ತಾಂತರದ ವೇಳೆ ಭಾವುಕರಾದ ಡಿ.ಕೆ.ಶಿವಕುಮಾರ್ ಅವರು ಇಡೀ ಪಕ್ಷ ನಿಮ್ಮ ದುಃಖದಲ್ಲಿ ಭಾಗಿಯಾಗಿದೆ, ನಿಮ್ಮ ಕುಟುಂಬದ ಜತೆ ನಾವಿದ್ದೇವೆ ಎಂದು ಸಂತೈಸಿದರು.

ಸೂರಜ್ ಹೆಗ್ಡೆ ಕಾಂಗ್ರೆಸ್ ಪಕ್ಷದ ವಿಚಾರಧಾರೆಯಲ್ಲಿ ಅತಿಯಾದ ನಂಬಿಕೆ ಇಟ್ಟಿದ್ದರು. ಯುವ ಕಾಂಗ್ರೆಸ್‌ನಲ್ಲಿದ್ದಾಗ ಅವರು ಯುವ ಭಾರತೀಯರಿಗೆ ಮಾರ್ಗದರ್ಶನ ನೀಡುತ್ತಿದ್ದರು.

ಅವರ ನಿಧನ ಕಾಂಗ್ರೆಸ್ ಕುಟುಂಬಕ್ಕೆ ತುಂಬಲಾರದ ನಷ್ಟವಾಗಿದೆ. ಅವರ ಕುಟುಂಬ, ಸ್ನೇಹಿತರಿಗೆ ಅವರ ಅಗಲಿಕೆಯ ನೋವು ಭರಿಸುವ ಶಕ್ತಿ ಸಿಗಲಿ ರಾಹುಲ್ ಗಾಂಧಿ ಸಂತಾಪ ಸೂಚಿಸಿದ್ದರು.

ಇದಕ್ಕೂ ಮೊದಲು ಸಿಎಂ ಡಿ.ಕೆ.ಶಿವಕುಮಾರ್ ಅವರು ಅಂತಿಮ ಗೌರವ ಸಲ್ಲಿಸಲು ಆಗಮಿಸಿದ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಅವರ ಜತೆ ಬರಮಾಡಿಕೊಂಡರು. ಅಂತಿಮ ನಮನದ ನಂತರ ವಿಮಾನ ನಿಲ್ದಾಣಕ್ಕೆ ಮತ್ತೆ ತೆರಳಿ ಬೀಳ್ಕೊಟ್ಟರು.

# ಧಾರವಾಡ: ಹಂಚಿನಮನಿ ಶಾಲೆಯ ವಿದ್ಯಾರ್ಥಿ ಅನುಮಾನಾಸ್ಪದ ರೀತಿಯಲ್ಲಿ ನೇಣಿಗೆ ಶರಣು

■ ಕನ್ನಡ ಮಾತೃ ಭೂಮಿ ವಾರ್ತೆ

**ಧಾರವಾಡ,ಜೂ.9-**ವಿದ್ಯಾರ್ಥಿಯೋರ್ವ ಅನುಮಾನಾಸ್ಪದ ರೀತಿಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಧಾರವಾಡದ ಹಂಚಿನಮನಿ ಆಂಗ್ಲ ಮಾಧ್ಯಮ ಶಾಲೆಗೆ ಸೇರಿದ ಹಾಸ್ಟೆಲ್ ನಲ್ಲಿ ಭಾನುವಾರ ನಡೆದಿದೆ.



ಪ್ರೀತಮ್ ಕಂಪ್ಲಿ (15) ಎಂಬ ವಿದ್ಯಾರ್ಥಿಯೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡವನು.ಪ್ರೀತಮ್ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನ ಹಿರೇಉಳ್ಳಿಗೇರಿ ಗ್ರಾಮದವನಾಗಿದ್ದ.

ಈತನನ್ನು ಧಾರವಾಡದ ಹಂಚಿನಮನಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿದ್ಯಾಭ್ಯಾಸಕ್ಕೆಂದು ಕರೆದುಕೊಂಡು ಬಂದು ಹಾಸ್ಟೆಲ್ ನಲ್ಲಿ ಇಡಲಾಗಿತ್ತು.

ಭಾನುವಾರ ಸಂಜೆವರೆಗೂ ಪ್ರೀತಮ್ ಚೆನ್ನಾಗಿಯೇ ಇದ್ದ. ಬೇರೆಯವರ ಮೊಬೈಲ್‌ನಿಂದ ತನ್ನ ಪಾಲಕರಿಗೆ ಕರೆ ಮಾಡಿ ಮಾತನಾಡಿದ್ದಾನೆ. ಆದರೆ, ಅದಾದ ನಂತರ ಏಕಾಏಕಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಆತನ ಪಾಲಕರು ತಿಳಿಸಿದ್ದಾರೆ.

ಈ ವಿಷಯ ಗೊತ್ತಾದ ಕೂಡಲೇ ಸ್ಥಳಕ್ಕೆ ಬಂದ ಆತನ ಪೋಷಕರು, ನಮ್ಮ ಮಗ ಆತ್ಮಹತ್ಯೆ ಮಾಡಿಕೊಳ್ಳುವವನಲ್ಲ. ಸಂಜೆ ನಮ್ಮೊಂದಿಗೆ ಮಾತನಾಡಿದವನು ಏಕಾಏಕಿ ಹೇಗೆ ನೇಣು ಹಾಕಿಕೊಳ್ಳುತ್ತಾನೆ.

ಆತ ಆತ್ಮಹತ್ಯೆ ಮಾಡಿಕೊಂಡಿಲ್ಲ. ಇದರ ಹಿಂದೆ ಬೇರೆ ಯಾರದ್ದೋ ಕೈವಾಡ ಇದೆ. ಪೊಲೀಸರು ಇದನ್ನು ತನಿಖೆ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ತಮ್ಮ ಮಗನ ಪಾರ್ಥೀವ ಶರೀರ ಕಂಡು ಪ್ರೀತಮ್‌ನ ತಂದೆ, ತಾಯಿ ರೋದಿಸುತ್ತಿದ್ದ ದೃಶ್ಯ ಕರುಳು ಹಿಂಡುವಂತಿತ್ತು. ಧಾರವಾಡ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ಪ್ರೀತಮ್ ನ ಪಾರ್ಥೀವ ಶರೀರವನ್ನು ಮರಣೋತ್ತರ ಪರೀಕ್ಷೆಗಾಗಿ ಧಾರವಾಡ ಜಿಲ್ಲಾಸ್ಪತ್ರೆಯ ಶವಾಗಾರಕ್ಕೆ ತರಲಾಗಿತ್ತು.

ಈ ಸಂಬಂಧ ಧಾರವಾಡ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

# ಪ್ರಿಯಾಂಕ್ ಖರ್ಗೆ ಅವರ ಅಪ್ಪನಿಂದಲೇ ಆರ್‌ಎಸ್‌ಎಸ್‌ಗೆ ಏನೂ ಮಾಡಲು ಆಗಿಲ್ಲ-ಸಿ.ಟಿ.ರವಿ

**ಬೆಂಗಳೂರು,ಜೂ.9-**ಆರ್‌ಎಸ್‌ಎಸ್ ಬಗ್ಗೆ ಪ್ರಿಯಾಂಕ್ ಖರ್ಗೆ ಅವರ ಅಪ್ಪನಿಂದಲೇ ಏನೂ ಮಾಡಲು ಆಗಿಲ್ಲ. ಬೆಂಕಿ ಹಚ್ಚೋ ಕೆಲಸ ಮಾಡಬೇಡಿ. ಆ ಬೆಂಕಿ ನಿಮ್ಮನ್ನೂ ಸುಡುತ್ತದೆ ಎಂದು ಮಾಜಿ ಸಚಿವ ಸಿ.ಟಿ.ರವಿ ವಾಗ್ದಾಳಿ ನಡೆಸಿದ್ದಾರೆ.

ವಿಧಾನಸೌಧದಲ್ಲಿಂದು ಮಾತನಾಡಿದ ಅವರು, ಐ ವಿಲ್ ಕ್ರಶ್ ಆರ್‌ಎಸ್‌ಎಸ್ ಎಂದು ನೆಹರು ಹೇಳಿದ್ರು. ಪ್ರಿಯಾಂಕ್ ಖರ್ಗೆ ಅವರ ಅಪ್ಪನಿಂದಲೇ ಏನೂ ಮಾಡಲು ಆಗಿಲ್ಲ. ಇವು ನಿಮ್ಮ್ ಪಕ್ಷದ ಅಧಿಕಾರದ ಕೊನೆ ದಿನಗಳು. ನಿಮ್ಮಪ್ಪನಾಣೆ ಮತ್ತೆ ಅಧಿಕಾರಕ್ಕೆ ಬರಲ್ಲ.ಆರ್‌ಎಸ್‌ಎಸ್ ರಾಜಕೀಯಪ್ರೇರಿತ ಅಲ್ಲ. ನೋಂದಣಿ ಮಾಡಿಕೊಳ್ಳಲು ಅದು ವ್ಯಾವಹಾರಿಕ ಸಂಘಟನೆ ಅಲ್ಲ ಎಂದು ಕಿಡಿ ಕಾರಿದರು.

ಅಕ್ರಮ ಬಾಂಗ್ಲಾ ನಿವಾಸಿಗಳಿದ್ದಾರೆ. ಮಾದಕ ವ್ಯಸನ ಕೃತ್ಯದಲ್ಲಿ ಭಾಗಿಯಾಗಿದ್ದಾರೆ. ಆ ಕಡೆ ಗಮನ ಕೊಡಿ. ಮಹಿಳೆಯರು ನಾಪತ್ತೆ ಆಗುತ್ತಿದ್ದಾರೆ. ಇಲ್ಲೇ ಇದ್ದು ಬಾಂಬ್ ತಯಾರು ಮಾಡುವವರ ಬಗ್ಗೆ ಗಮನ ಕೊಡಿ. ಆರ್‌ಎಸ್‌ಎಸ್‌ದೇಶದ್ರೋಹಿ ಸಂಘಟನೆ ಅಲ್ಲ, ಅದರಿಂದ ಅಪಾಯವೂ ಇಲ್ಲ. ನೀವು ಗೃಹ ಸಚಿವರು, ಗೂಂಡಾ ಅಲ್ಲ. ಗೃಹ ಸಚಿವರ ತರ ವರ್ತಿಸಿ. ಈಗ ದಬ್ಬಾಳಿಕೆ ಮಾಡಿದ್ರೆ, ಪಶ್ಚಿಮ ಬಂಗಾಳದ ರೀತಿ ಆಗಬಹುದು ಎಂಬ ಎಚ್ಚರಿಕೆ ವಹಿಸಿ. ಮಹಾರಾಷ್ಟ್ರ ಪೊಲೀಸರು ಬಂದು ಇಲ್ಲಿ ಅಕ್ರಮ ಪತ್ತೆ ಮಾಡ್ತಾರೆ. ಆ ಬಗ್ಗೆ ಪೊಲಿಸರಿಗೆ ಕೇಳಿ. ಬೆಂಕಿ ಹಚ್ಚೋ ಕೆಲಸ ಮಾಡಬೇಡಿ. ಆ



ಬೆಂಕಿ ನಿಮ್ಮನ್ನೂ ಸುಡುತ್ತದೆ ಎಂದಿದ್ದಾರೆ.

ಕಾಂಗ್ರೆಸ್‌ನವರು ಈ ಬಗ್ಗೆ ಪಾಠ ಮಾಡಬೇಕಿಲ್ಲ: ದೇವೇಗೌಡರಿಗೆ ಗೌರವ ಅಧಿಕಾರದಿಂದ ಬಂದಿದ್ದಲ್ಲ. ಅವರಿಗೆ ಸಹಜವಾಗಿ ಬಂದಿರೋದು. ಮೋದಿಯವರು ಸಹಜ ಪ್ರೀತಿ, ವಾತ್ಸಲ್ಯ ತೋರಿಸಿದ್ದಾರೆ. ಕಾಂಗ್ರೆಸ್‌ನವರು ಈ ಬಗ್ಗೆ ಪಾಠ ಮಾಡಬೇಕಿಲ್ಲ ಎಂದು ಇದೇ ವೇಳೆ ವಾಗ್ದಾಳಿ ನಡೆಸಿದರು.

ಪಿ.ವಿ.ನರಸಿಂಹ ರಾವ್ ಅವರ ಅಂತ್ಯ ಸಂಸ್ಕಾರದಲ್ಲಿ ದ್ವೇಷ ತೀರಿಸಿಕೊಂಡವರು, ಮನಮೋಹನ್ ಸಿಂಗ್ ಪಿಎಂ ಇದ್ದಾಗ ಹೇಗೆ ನಡೆಸಿಕೊಂಡ್ರು,

ಇವರ ಖಾಂದಾನ್‌ಗೆ ನೂರಾರು ಎಕರೆ, ಅಂಬೇಡ್ಕರ್ ಅವರಿಗೆ ಸಮಾಧಿಗೆ ಸ್ಥಳ ಕೊಟ್ಟಿಲ್ಲ, ಮೋದಿ ಹಾಗೂ ದೇವೇಗೌಡರ ಸಂಬಂಧ ವ್ಯಾವಹಾರಿ ಕವಾದುದಲ್ಲ. ಅಣ್ಣ-ತಮ್ಮ, ಅಪ್ಪ-ಮಗನ ರೀತಿಯ ಸಂಬಂಧ ಅದು ಎಂದರು.

ಜನರೇ ನಟ್ಟು ಬೋಲ್ಟು ಟೈಟ್ ಮಾಡುತ್ತಾರೆ: ಒಳ್ಳೆ ಕೆಲಸ ಮಾಡಿ ಎಂದು ಈ ಸರ್ಕಾರಕ್ಕೆ ಶುಭ ಹಾರೈಸುತ್ತೇನೆ. ಖಾತೆ ಹಂಚಿಕೆ ಜವಾಬ್ದಾರಿ ಸಿಎಂ ಅವರದ್ದು. ರಾಜ್ಯದ ಆಡಳಿತದ ಮೇಲ್ ಪರಿಣಾಮ ಆಗತ್ತದೆ.

ಹಾಗಾಗಿ ಬೇಗ ಬಗೆಹರಿಸಿ. ಹಿಂದಿನ ಅವಧಿಯಂತೆ ಭ್ರಷ್ಟಾಚಾರ ಆಗದಂತೆ ತಡೆಯಿರಿ. 60% ಕಮಿಷನ್ ಕರ್ನಾಟಕಕ್ಕೆ ಕೆಟ್ಟ ಹೆಸರು ಬಂತು. 40% ಕಮಿಷನ್, ಪೆಸಿಎಂ ಎಂದು ಹೇಳಿದ್ರಿ. ಈಗ ನಿಮ್ಮ್ಮೇಲೆ ಗುತ್ತಿಗೆದಾರರು 60% ಆರೋಪ ಮಾಡಿದ್ದಾರೆ. ಭ್ರಷ್ಟಾಚಾರ ಕಡಿಮೆ ಮಾಡ್ತಿರೋ, ನಟ್ಟುಬೋಲ್ಟು ಟೈಟ್ ಮಾಡ್ತಿರೋ. ಮುಂದೆ ಜನರೇ ನಿಮ್ಮ ನಟ್ಟು ಬೋಲ್ಟು ಟೈಟ್ ಮಾಡ್ತಾರೆ ಎಂದು ಟೀಕಿಸಿದರು. ಪರಿಷತ್‌ಗೆ ಎನ್‌ಡಿಎ ಮೂರನೇ ಅಭ್ಯರ್ಥಿ ವಿಚಾರವಾಗಿ ಪ್ರತಿಕ್ರಿಯಿಸಿ, ಕಾಂಗ್ರೆಸ್‌ಗೂ ಬಹುಮತ ಇಲ್ಲ. ಬಿಜೆಪಿಯ ಹೆಚ್ಚುವರಿ ಮತಗಳನ್ನು ಜೆಡಿಎಸ್‌ಗೆ ಕೊಡುತ್ತೇವೆ. ಜೆಡಿಎಸ್ ತಂತ್ರಗಾರಿಕೆ ಮಾಡಿ ಯಶಸ್ಸಾದರೆ ಗೆಲ್ತೇವೆ ಎಂದು ಸಿ.ಟಿ.ರವಿ ತಿಳಿಸಿದರು.

# ...ಮೊದಲನೇ ಪುಟದಿಂದ

## ಸಂಪುಟ ವಿಸ್ತರಣೆ ಕುರಿತಂತೆ ಹೈಕಮಾಂಡ್ ಜೊತೆ ಸಿಎಂ ಶಿವಕುಮಾರ್ ಚರ್ಚೆ..!

ಹಲವು ಕಾಂಗ್ರೆಸ್ ಶಾಸಕರು ದೆಹಲಿಯಲ್ಲಿ ಲಾಬಿ ನಡೆಸುತ್ತಿರುವ ಸಂದರ್ಭದಲ್ಲಿ ಮುಖ್ಯಮಂತ್ರಿ ದೆಹಲಿಗೆ ಭೇಟಿ ನೀಡುತ್ತಿದ್ದಾರೆ. ಸಂಪುಟಕ್ಕೆ ಹೊಸ ಮುಖಗಳನ್ನು ಸೇರಿಸಿಕೊಳ್ಳುವ ಬೇಡಿಕೆ ಇದೆ. ಮೇ 28ರಂದು ಸಿದ್ದರಾಮಯ್ಯ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಜೂನ್ 3ರಂದು ಶಿವಕುಮಾರ್ 13 ಸಚಿವರೊಂದಿಗೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದರು. ಇದೀಗ 20 ಸಚಿವ ಸ್ಥಾನಗಳು ಇನ್ನೂ ಖಾಲಿಯಿದ್ದು, ಅವುಗಳಲ್ಲಿ ಹೆಚ್ಚಿನವು ಈ ತಿಂಗಳ ಅಂತ್ಯದ ವೇಳೆಗೆ ಭರ್ತಿ ಯಾಗುತ್ತವೆ ಎಂಬ ಊಹಾಪೋಹಗಳು ಹರಡಿವೆ.

**ಸಚಿವರ ಖಾತೆ ಖ್ಯಾತೆ :** ಬೆಂಗಳೂರಿನ ಎರಡು ಪ್ರಭಾವಿ ಇಲಾಖೆಗಳಾದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಮತ್ತು ಬೆಂಗಳೂರು ಮಹಾನಗರ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ಬಿಎಂಆರ್‌ಡಿಎ) ವನ್ನು ಡಿಕೆ ಶಿವಕುಮಾರ್ ತಮ್ಮಲ್ಲೇ ಇಟ್ಟುಕೊಂಡಿರುವುದರಿಂದ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಖಾತೆ ಕುರಿತಂತೆ ಸಚಿವ ಕೃಷ್ಣ ಭೈರೇಗೌಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹೀಗಾಗಿ ಅವರನ್ನು ಇಲಾಖೆಯ ಜವಾಬ್ದಾರಿಯನ್ನು ವಹಿಸಿಕೊಂಡಿಲ್ಲ, ಇದಕ್ಕೂ ಮುನ್ನ ನನಗೆ ಜಲಸಂಪನ್ಮೂಲ ಖಾತೆ ಬೇಕು ಬೆಂಗಳೂರು ಅಭಿವೃದ್ಧಿ ಖಾತೆಗಾಗಿ ರಾಮಲಿಂಗಾ ರೆಡ್ಡಿ ಪಟ್ಟುಹಿಡಿದಿದ್ದರು. ನಂತರ ರಾಮಲಿಂಗಾ ರೆಡ್ಡಿ ಸಮಾಧಾನಗೊಂಡಿದ್ದರು. ಮತ್ತೊಂದೆಡೆ, ಸಚಿವ ಸಂಪುಟದ ಬಗ್ಗೆ ಆಹಾರ ಮತ್ತು ನಾಗರಿಕ ಸರಬರಾಜು, ಗ್ರಾಹಕ ವ್ಯವಹಾರಗಳ ಸಚಿವ ಕೆ.ಎಚ್ ಮುನಿಯಪ್ಪ ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು.

## ದಾವಣಗೆರೆ: ಮಹಿಳೆ ಮೇಲೆ ಗ್ಯಾಂಗ್ ರೇಪ್ 10 ಆರೋಪಿಗಳ ಬಂಧನ

ಹಾಕಿ ಕೊಟ್ಟು ತಂಪು ಪಾನೀಯ ಕುಡಿಸಿದ್ದರು. ಬಳಿಕ ಅರೆ ಪ್ರಜ್ಞಾವಸ್ಥೆಯಲ್ಲಿದ್ದಾಗ ಊರ ಹೊರಗಿನ ಜಮೀನಿಗೆ ಕರೆದೊಯ್ದು ಮಹಿಳೆ ಮೇಲೆ ಅತ್ಯಾಚಾರ ಮಾಡಿದ್ದಾರೆ ಎಂದು ಮಹಿಳೆ ದೂರಿನಲ್ಲಿ ತಿಳಿಸಿದ್ದಾರೆ. ಬಳಿಕ ಮಹಿಳೆಯ ಫೋಟೋ, ವಿಡಿಯೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದಾಗ ಪ್ರಕರಣ ಬೆಳಕಿಗೆ ಬಂದಿದೆ. ಆಗ ಸಂತ್ರಸ್ತೆಯು ಈ ಕುರಿತು ಪೊಲೀಸ್ ಠಾಣೆಗೆ ಬಂದು ದೂರು ನೀಡಿದ್ದಾರೆ.

ಗ್ರಾಮದ ಹೊರವಲಯದಲ್ಲಿನ ತೋಟದಲ್ಲಿ ಆರೋಪಿಗಳು ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿರುವ ಕುರಿತು ಪ್ರಕರಣ ದಾಖಲಾಗಿದೆ ಎಂದು ಎಸ್ಪಿ ಶೇಖರ್ ಹೆಚ್ ಟಿ ಅವರು "ಈಟಿವಿ ಭಾರತ್" ಕ್ಕೆ ಮಾಹಿತಿ ನೀಡಿದ್ದಾರೆ. ಅತ್ಯಾಚಾರದ ಕೃತ್ಯವನ್ನು ಮೊಬೈಲ್‌ನಲ್ಲಿ ವಿಡಿಯೋ ಮಾಡಿಕೊಂಡ ಆರೋಪಿಗಳು ಬಳಿಕ ಪ್ರಕರಣ ಗಂಭೀರವಾಗುತ್ತಿದ್ದಂತೆ ಡಿಲಿಟ್ ಮಾಡಿದ್ದಾರೆ ಎಂದು ಎಸ್ಪಿ ತಿಳಿಸಿದ್ದಾರೆ. ಅತ್ಯಾಚಾರ ಪ್ರಕರಣ ದಾಖಲಿಸಿಕೊಂಡ ಪೊಲೀಸರು, ಸಂತ್ರಸ್ತ ಮಹಿಳೆಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ್ದಾರೆ. ಸ್ಥಳಕ್ಕೆ ಎಸ್ಪಿ ಶೇಖರ್ ಹೆಚ್ ಟಿ ಸೇರಿದಂತೆ ಹಿರಿಯ ಅಧಿಕಾರಿಗಳ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ತಂಪು ಪಾನೀಯದಲ್ಲಿ ಮತ್ತು ಬರುವ ಔಷಧ ಕುಡಿಸಿ ಮಹಿಳೆ ಮೇಲೆ ಗ್ಯಾಂಗ್ ರೇಪ್ ಎಸಗಲಾಗಿದೆ ಎಂದು ಎಫ್‌ಐಆರ್‌ನಲ್ಲಿ ಉಲ್ಲೇಖವಾಗಿದೆ.

## ಸಿಎಂ ಡಿಕೆಶಿ ಮುಖ್ಯ ಸಲಹೆಗಾರನಾಗಿ ಸುನಿಲ್ ಕನುಗೋಲು ನೇಮಿಸಿ ಆದೇಶ, ಸಂಪುಟ ದರ್ಜೆ ಸ್ಥಾನಮಾನ

ಎಲ್ಲ ಸೌಲಭ್ಯಗಳನ್ನು ನೀಡಿ ಆದೇಶಿಸಲಾಗಿದೆ. ಸುನಿಲ್ ಕನುಗೋಲು 2023 ಚುನಾವಣೆ ವೇಳೆ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಪ್ರಮುಖ ಸ್ಟ್ರೆಟಜಿಸ್ಟ್ ಆಗಿ ಕಾರ್ಯನಿರ್ವಹಿಸಿದ್ದರು. ಹೀಗಾಗಿ ಅವರನ್ನು ರಾಜ್ಯ ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಮುಖ್ಯ ಸಲಹೆಗಾರರನ್ನಾಗಿ ನೇಮಿಸಿ ಆದೇಶಿಸಲಾಗಿದೆ. ಆದರೆ, ಕನುಗೋಲು ಈವರೆಗೆ ಸಾರ್ವಜನಿಕವಾಗಿ ಮುನ್ನಲೆಗೆ ಬಂದಿಲ್ಲ. ಯಾವ ರೀತಿಯ ಸಲಹೆಗಳನ್ನು ಸಿಎಂಗೆ ನೀಡಿದ್ದಾರೆ ಎಂಬುದೂ ನಿಗೂಢವಾಗಿದೆ.ಇದೇ ವೇಳೆ, ಕೆಎಎಸ್ ಹಿರಿಯ ಶ್ರೇಣಿ ಅಧಿಕಾರಿ ನಾರಾಯಣರೆಡ್ಡಿ ಕನಕರೆಡ್ಡಿ ಎಂಬುವರನ್ನು ಸಾರ್ವಜನಿಕ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ವಿಶೇಷ ಕರ್ತವ್ಯಾಧಿಕಾರಿ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಥವಾ ಮುಖ್ಯಮಂತ್ರಿಯವರ ಪದಾವಧಿಯವರೆಗೆ ನೇಮಿಸಲಾಗಿದೆ. ಪ್ರಸ್ತುತ ಅವರು ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರ ಆಪ್ತಕಾರ್ಯದರ್ಶಿಯಾಗಿದ್ದಾರೆ.

ಯಾರು ಈ ಸುನೀಲ್ ಕನುಗೋಲು?: ಬಳ್ಳಾರಿ ಮೂಲದವರಾದ ಸುನೀಲ್ ಕನುಗೋಲು 2017-18ರ ವೇಳೆ ಬಿಜೆಪಿ ಪರ ಚುನಾವಣಾ ತಂತ್ರಗಾರರಾಗಿ ಕೆಲಸ ಮಾಡಿದ್ದರು. ಅದಲ್ಲದೇ ಚುನಾವಣಾ ಚಾಣಕ್ಯ ಪ್ರಶಾಂತ್ ಕಿಶೋರ್ ತಂಡದಲ್ಲಿ ಪ್ರಮುಖ ಪಾತ್ರವನ್ನು ನಿರ್ವಹಿಸಿದ್ದರು. ಬಳಿಕ ಬದಲಾದ ರಾಜಕೀಯ ಸನ್ನಿವೇಶದಲ್ಲಿ ಕಾಂಗ್ರೆಸ್‌ಗೆ ಹತ್ತಿರವಾದರು. ಈ ಹಿಂದಿನ ಬಿಜೆಪಿ ಸರ್ಕಾರದ ಕಮಿಷನ್ ಆರೋಪವನ್ನು ಜನರ ಬಳಿಗೆ ತಲುಪಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಪಕ್ಷ ಮಾಡಿದ್ದ ಪೇಸಿಎಂ ಅಭಿಯಾನದ ಹಿಂದಿನ ರೂವಾರಿ ಇವರು. ಬಿಜೆಪಿ ವಿರುದ್ಧ ಡಿಜಿಟಲ್ ಅಭಿಯಾನ, ಚುನಾವಣಾ ತಂತ್ರಗಾರಿಕೆ ಹಿಂದಿನ ರೂವಾರಿ ಕೂಡ ಇವರಾಗಿದ್ದರು. ಇದಲ್ಲದೇ ಕಾಂಗ್ರೆಸ್ ಅಧಿಕಾರದ ಗದ್ದುಗೆ ಹಿಡಿಯುವಲ್ಲಿ ಮುಖ್ಯ ಪಾತ್ರವಹಿಸಿದ್ದರು. ಚುನಾವಣಾ ಪೂರ್ವ ಗ್ಯಾರಂಟಿ ಕಾರ್ಡ್‌ಗಳನ್ನು ಹಂತ ಹಂತವಾಗಿ ಘೋಷಿಸಿ ಜನರ ಮನಮುಟ್ಟುವಂತೆ ಮಾಡುವಲ್ಲಿ ಕನುಗೋಲು ಪಾತ್ರ ಪ್ರಮುಖವಾಗಿದೆ. ಹಾಗಾಗಿ ಇದೀಗ ಅವರನ್ನು ಮತ್ತೆ ಸಿಎಂ ಮುಖ್ಯ ಸಲಹೆಗಾರನಾಗಿ ನೇಮಿಸಿ ಆದೇಶ ಹೊರಡಿಸಿದೆ.

## ರಾಜ್ಯ ನಿಧಿಯಿಂದ 1 ಸಾವಿರ, ಕೇಂದ್ರದ ಸಹಾಯದಿಂದ 4 ಸಾವಿರ ಬಸ್‌ಗಳ ಖರೀದಿ-ಬೈರತಿ ಸುರೇಶ್

ಸಚಿವ ಬೈರತಿ ಸುರೇಶ್ ಸೋಮವಾರ ಸಾರಿಗೆ ಸಚಿವರಾಗಿ ಅಧಿಕೃತವಾಗಿ ಅಧಿಕಾರ ವಹಿಸಿಕೊಂಡರು. ಈ ವೇಳೆ ಅವರು ಅಧಿಕಾರಿಗಳನ್ನು ಭೇಟಿ ಮಾಡಿ ಇಲಾಖೆ ಬಗ್ಗೆ ಮಾಹಿತಿ ಪಡೆದರು.ನಾಲ್ಕು ಸಾರಿಗೆ ನಿಗಮಗಳಿಗೆ ಭೇಟಿ, ಪರಿಶೀಲನೆ, ಮಾತುಕತೆ: ಅಧಿಕಾರ ಸ್ವೀಕಾರದ ಬಳಿಕ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಪ್ರಧಾನ ಕಚೇರಿಗೆ ಭೇಟಿ ನೀಡಿ, ನಾಲ್ಕು ಸಾರಿಗೆ ನಿಗಮಗಳಾದ - ಓಖ್ಖಖಇ, ಬೆಂಗಳೂರು ಮಹಾನಗರ ಸಾರಿಗೆ ನಿಗಮ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಘೆಗಓಖ್ಖಇ), ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಮುಖ್ಯಸ್ಥರು ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಾರಿಗೆ ಇಲಾಖೆಯ ಕಾರ್ಯವೈಖರಿಯನ್ನು ಪರಿಶೀಲಿಸಿದರು. ಕಾಂಗ್ರೆಸ್ ಸರ್ಕಾರವು ತನ್ನ ಐದು ಖಾತರಿ ಯೋಜನೆಗಳ ಮೂಲಕ ಜನರ ಜೀವನವನ್ನು ಸುಧಾರಿಸಿದೆ. ಮಹಿಳೆಯರಿಗೆ ಉಚಿತ ಬಸ್ ಪ್ರಯಾಣವನ್ನು ಒದಗಿಸುವ ಶಕ್ತಿ ಯೋಜನೆಯಿಂದ ಕೋಟ್ಯಂತರ ಮಹಿಳೆಯರು ಪ್ರಯೋಜನ ಪಡೆಯುತ್ತಿದ್ದಾರೆ ಮತ್ತು ಈ ಯೋಜನೆ ಪರಿಚಯಿಸಿದಾಗಿನಿಂದ ಪ್ರಯಾಣಿಕರ ಸಂಖ್ಯೆ ಸುಮಾರು 40 ಪ್ರತಿಶತದಷ್ಟು ಹೆಚ್ಚಾಗಿದೆ ಎಂದು ಸುರೇಶ್ ತಮ್ಮ ಕಚೇರಿಯಿಂದ ಬಿಡುಗಡೆಯಾದ ಹೇಳಿಕೆಯಲ್ಲಿ ಉಲ್ಲೇಖಿಸಿದ್ದಾರೆ.ಸಾವಿರ ಹೊಸ ಬಸ್ ಖರೀದಿ: ರಾಜ್ಯ ನಿಧಿಯನ್ನು ಬಳಸಿಕೊಂಡು 1,000 ಬಸ್‌ಗಳನ್ನು ಖರೀದಿಸಲಿದೆ ಎಂದು ಸಚಿವರು ಹೇಳಿದ್ದಾರೆ. ಇದರ ಜೊತೆಗೆ ಕೇಂದ್ರ ಸರ್ಕಾರದ ಆರ್ಥಿಕ ನೆರವಿನೊಂದಿಗೆ 4,000 ವಿದ್ಯುತ್ ಬಸ್‌ಗಳನ್ನು ಖರೀದಿಸಲಾಗುವುದು. ಈ ಬಸ್‌ಗಳನ್ನು ಹಂತ ಹಂತವಾಗಿ ಖರೀದಿಸಿ ನಾಲ್ಕು ಸಾರಿಗೆ ನಿಗಮಗಳಿಗೆ ವಿತರಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.ಮಹಿಳೆಯರು - ಯುವತಿಯರ ರಕ್ಷಣೆಗೆ ವಿಶೇಷ ಆದ್ಯತೆ: ಮಹಿಳೆಯರು ಮತ್ತು ಯುವತಿಯರು ಹಾಗೂ ಬಾಲಕಿಯರ ಸುರಕ್ಷತೆಗೆ ವಿಶೇಷ ಆದ್ಯತೆ ನೀಡಲಾಗುತ್ತಿದೆ ಎಂದು ಒತ್ತಿ ಹೇಳಿದ ಸುರೇಶ್, ವಾಣಿಜ್ಯ ಕಾರುಗಳು, ಟ್ಯಾಕ್ಸಿಗಳು ಮತ್ತು ಇತರ ಸಾರಿಗೆ ವಾಹನಗಳಂತಹ ಖಾಸಗಿ ಪ್ರಯಾಣಿಕ ವಾಹನಗಳಲ್ಲಿ, ವಾಹನ ಸ್ಥಳ ಟ್ರ್ಯಾಕಿಂಗ್ ವ್ಯವಸ್ಥೆಗಳು (ವಿಎಲ್‌ಟಿಎಸ್) ಅಳವಡಿಕೆಯನ್ನು ತ್ವರಿತಗೊಳಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಹೇಳಿದ್ದಾರೆ. ಇಲ್ಲಿಯವರೆಗೆ, ಈ ವ್ಯವಸ್ಥೆಯನ್ನು ಒಂದು ಲಕ್ಷಕ್ಕೂ ಹೆಚ್ಚು ವಾಹನಗಳಲ್ಲಿ ಅಳವಡಿಸಲಾಗಿದೆ. ಉಳಿದ ನಾಲ್ಕರಿಂದ ಐದು ಲಕ್ಷ ವಾಹನಗಳಲ್ಲಿ ಮುಂದಿನ ಮೂರರಿಂದ ನಾಲ್ಕು ತಿಂಗಳೊಳಗೆ ಅಳವಡಿಕೆಯನ್ನು ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

## ಕೇಂದ್ರ ಜಂಟಿ ಕಾರ್ಯದರ್ಶಿ ಉಜ್ವಲ್ ಘೋಷ ಭೇಟಿ: ಪರಿಶೀಲನೆ

ಚರ್ಚಿಸಿದರು. ಆಸ್ಪತ್ರೆಯ ಸ್ವಚ್ಚತೆ, ವೈದ್ಯಕೀಯ ಸೌಲಭ್ಯ, ಸಿಬ್ಬಂದಿಗಳ ಹಾಜರಾತಿ ಕುರಿತು ಮಾಹಿತಿ ಪಡೆದರು. ಓಪೆಕ್ ಆಸ್ಪತ್ರೆಗೆ ಭೇಟಿ ನೀಡಿ ವಿಶೇಷ ಸೌಲಭ್ಯ ,ವೈದ್ಯರ ಸೇವೆ ಕುರಿತು ಮಾಹಿತಿ ಪಡೆದರು. ರಿಮ್ಸ್ ನಿರ್ದೇಶಕ ಡಾ.ರಮೇಶ, ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರ ಈಶ್ವರ ಕಾಂದೂ ,ಜೋಬಿನ್ ಮಹೋಪಾತ್ರ ಸೇರಿ ಹಿರಿಯ ಅಧಿಕಾರಿಗಳು, ವೈದ್ಯರು ಇದ್ದರು.ನಂತರ ಜಿಲ್ಲಾ ಪಂಚಾಯ್ತಿ ಆವರಣದಲ್ಲಿ ಹೊಸದಾಗಿ ಪ್ರಾರಂಭವಾದ ಅಕ್ಕ ಕೆಫೆಗೆ ಭೇಟಿ ನೀಡಿ ಸ್ವ ಸಹಾಯ ಗುಂಪುನಿಂದ ನಿರ್ವಹಣೆ ಮಾಡುತ್ತಿರುವ ಮಹಿಳೆಯೊಂದಿಗೆ ಸಮಾಲೋಚನೆ ನಡೆಸಿದರು. ಅಕ್ಕ ಕೆಫೆಯ ಉದ್ದೇಶ ಹಾಗೂ ಮಹಿಳೆಯರ ಸ್ವಾವಲಂಬನೆ ಇರುವ ಅವಕಾಶಗಳ ಕುರಿತು ಮಾಹಿತಿ ಪಡೆದರು. ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕಾಂದೂ, ಡಾ.ಟಿ.ರೋಣಿ ಸೇರಿದಂತೆ ಇಲಾಖೆ ಅಧಿಕಾರಿಗಳಿದ್ದರು.

## ವಿಧಾನಸೌಧ ಆವರಣದಲ್ಲಿರುವ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ ರೈತ..!

ಆತ್ಮಹತ್ಯೆಗೆ ಯತ್ನಿಸಿದ್ದಾರೆ. ತಮ್ಮ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದ್ದಕ್ಕಾಗಿ ಪರಿಹಾರ ಸಿಕ್ಕಿಲ್ಲ ಎಂದು ಆರೋಪಿಸಿ ವಿಧಾನಸೌಧ ಆವರಣದಲ್ಲಿರುವ ಮರವನ್ನು ಕಡಿಯಲು ಈ ಹಿಂದೆ 2025ರಲ್ಲಿ ಪ್ರಯತ್ನಿಸಿದ್ದರು ಎಂದು ಮೂಲಗಳು ತಿಳಿಸಿವೆ.ಮಂಗಳವಾರ, ಅವರು ಮತ್ತೊಮ್ಮೆ ಅದೇ ಮರದ ಬಳಿಗೆ ತಲುಪಿ ಹಸಿರು ಸ್ಕಾರ್ಫ್ ಬಳಸಿ ನೇಣು ಬಿಗಿದುಕೊಳ್ಳಲು ಪ್ರಯತ್ನಿಸಿದ್ದಾರೆ. ಅಲ್ಲಿ ನಿಯೋಜನೆಗೊಂಡಿದ್ದ ಪೊಲೀಸರು ಅವರ ಚಟುವಟಿಕೆಗಳನ್ನು ಗಮನಿಸಿದ ತಕ್ಷಣ, ಅವರನ್ನು ಪೊಲೀಸ್ ಠಾಣೆಗೆ ಕರೆದೊಯ್ದಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ವಿಶು ಕುರ್ಮಾ, ತಮ್ಮ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ. ಆದರೆ ಪರಿಹಾರವನ್ನು ಇನ್ನೂ ನೀಡಿಲ್ಲ ಎಂದು ಹೇಳಿದರು. ನಾಲ್ಕು ವಾರಗಳಲ್ಲಿ ವಿಷಯವನ್ನು ಅಂತಿಮಗೊಳಿಸಿ ಪರಿಹಾರವನ್ನು ಪಾವತಿಸುವಂತೆ ಚಿಕ್ಕಮಗಳೂರಿನ ಜಿಲ್ಲಾಧಿಕಾರಿಗೆ ನ್ಯಾಯಾಲಯ ನಿರ್ದೇಶಿಸಿತ್ತು. ಆದರೆ, ಮೂರು ತಿಂಗಳು ಕಳೆದರೂ ನಮಗೆ ಯಾವುದೇ ಪರಿಹಾರ ಸಿಕ್ಕಿಲ್ಲ. ಜಮೀನಿನಲ್ಲಿ ನಾನು ಶ್ರೀಗಂಧದ ಮರಗಳನ್ನು ಬೆಳೆಸಿದ್ದೇನೆ. ಅಗತ್ಯವಿರುವ ನೋಟಿಸ್ ನೀಡದೆಯೇ ಮರಗಳನ್ನು ಕಡಿಯಲು ಅಧಿಕಾರಿಗಳು ಯೋಜಿಸಿದ್ದಾರೆ. ಈ ಪ್ರಕ್ರಿಯೆಯ ಬಗ್ಗೆ ಯಾವುದೇ ಮಾಹಿತಿಯನ್ನು ತನಗೆ ಒದಗಿಸಿಲ್ಲ' ಎಂದು ವಿಶು ಕುಮಾರ್ ಆರೋಪಿಸಿದ್ದಾರೆ.

# ಒಬ್ಬರೇ ಶಿಕ್ಷಕ, 75 ವಿದ್ಯಾರ್ಥಿಗಳು: ಹೆಚ್ಚುವರಿ ಸಿಬ್ಬಂದಿ ನೇಮಕಕ್ಕೆ ಎಐಡಿಎಸ್‌ಒ ಆಗ್ರಹ..!

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.9-** ಸುರಪುರ ತಾಲ್ಲೂಕಿನ ಗೊಗಡಿಹಾಳ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ತಕ್ಷಣವೇ ಹೆಚ್ಚುವರಿ ಶಿಕ್ಷಕರನ್ನು ನೇಮಿಸಬೇಕು ಮತ್ತು ಮೂಲಸೌಕರ್ಯ ಕಲ್ಪಿಸಬೇಕೆಂದು ಆಗ್ರಹಿಸಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ (ಡಿಡಿಪಿಐ) ಕಚೇರಿ ಮುಂದೆ ಇಂದು ಆಲ್ ಇಂಡಿಯಾ ಡೆಮಾಕ್ರಟಿಕ್ ಸ್ಟೂಡೆಂಟ್ಸ್ ಆರ್ಗನೈಸೇಷನ್ (ಎಐಡಿಎಸ್‌ಒ) ನೇತೃತ್ವದಲ್ಲಿ ಶಾಲಾ ಮಕ್ಕಳು ಹಾಗೂ ಪೋಷಕರು ಪ್ರತಿಭಟನೆ ನಡೆಸಿದರು.

ಗೊಗಡಿಹಾಳದ ಈ ಶಾಲೆಯಲ್ಲಿ 1 ರಿಂದ 5 ನೇ ತರಗತಿಯವರೆಗೆ ಒಟ್ಟು 75ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಆದರೆ, ಇಡೀ ಶಾಲೆಗೆ ಕೇವಲ ಒಬ್ಬರೇ ಖಾಯಂ ಶಿಕ್ಷಕರಿದ್ದಾರೆ. ಇಲ್ಲಿನ ಏಕೈಕ ಶಿಕ್ಷಕರು ಐದೂ ತರಗತಿಗಳನ್ನು ಒಟ್ಟಿಗೆ ನಿಭಾಯಿಸುತ್ತಿರುವುದರಿಂದ ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.




ಬೋಧಕ ಸಿಬ್ಬಂದಿಯ ಕೊರತೆಯಷ್ಟೇ ಅಲ್ಲದೆ, ಶಾಲೆಗೆ ಕನಿಷ್ಠ ಮೂಲಸೌಕರ್ಯಗಳೂ ಇಲ್ಲ. ಶುದ್ಧ ಕುಡಿಯುವ ನೀರು, ವಿದ್ಯುತ್ ಸಂಪರ್ಕ, ಸುಸಜ್ಜಿತ ಶೌಚಾಲಯ ಹಾಗೂ ಆಟದ ಮೈದಾನದ ಸೌಲಭ್ಯವಿಲ್ಲದೆ ಮಕ್ಕಳು ಪ್ರತಿದಿನ ಪರದಾಡುವಂತಾಗಿದೆ ಎಂದು ಪೋಷಕರು ದೂರಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಎಐಡಿಎಸ್‌ಒ ಜಿಲ್ಲಾ ಸಂಚಾಲಕರಾದ ಶಿಲ್ಪಾ ಬಿ. ಕೆ. ಮಾತನಾಡಿ, ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳನ್ನು ಮತ್ತು ಅಲ್ಲಿನ ವಿದ್ಯಾರ್ಥಿಗಳ ಭವಿಷ್ಯವನ್ನು ಉಳಿಸುವುದು ಸರ್ಕಾರದ ಆದ್ಯ ಕರ್ತವ್ಯವಾಗಿದೆ. ಅಧಿಕಾರಿಗಳು ಕೇವಲ ಭರವಸೆ ನೀಡದೆ, ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಬಗೆಹರಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಮನವಿ ಪತ್ರ ಸ್ವೀಕರಿಸಲು ಎರಡು ಬಾರಿ ಅಧಿಕಾರಿಗಳು ಬಂದರೂ ಸೂಕ್ತ ಆಶ್ವಾಸನೆ ದೊರೆಯದ ಕಾರಣ ಪೋಷಕರು ಮತ್ತು ವಿದ್ಯಾರ್ಥಿಗಳು ಪಟ್ಟು ಬಿಡದೇ ಡಿಡಿಪಿಐ ಕಚೇರಿಯ ಬಾಗಿಲ ಮುಂದೆಯೇ ಕುಳಿತು ಮಧ್ಯಾಹ್ನದ ಊಟ ಮುಗಿಸಿ, ಪುನಃ ಪ್ರತಿಭಟನೆಯನ್ನು ಮುಂದುವರಿಸಿದರು. ಅಂತಿಮ ಸುತ್ತಿನ ಮಾತುಕಥೆಗಾಗಿ ಧಾವಿಸಿ ಬಂದ ಡಿಡಿಪಿಐ ಅವರು ಮನವಿ ಪತ್ರ ಸ್ವೀಕರಿಸಿ, ಒಂದು ವಾರದದೊಳಗೆ ಶಿಕ್ಷಕರನ್ನು ನಿಯೋಜನೆ ಮಾಡುವುದಾಗಿ ಭರವಸೆ ನೀಡಿದರು. ತದನಂತರವೇ ಈ ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಹಿಂಪಡೆಯಲಾಯಿತು.

ಪ್ರತಿಭಟನೆಯಲ್ಲಿ ಗೊಗಡಿಹಾಳ ಗ್ರಾಮದ ಲಕ್ಷ್ಮೀಬಾಯಿ, ದೇವಮ್ಮ, ರೇಣುಕಾ, ಶಾಂತಮ್ಮ, ಶೋಭಾ, ಮಲ್ಲಮ್ಮ, ಯಲ್ಲಮ್ಮ, ಭೀಮಣ್ಣ, ರಾಯಪ್ಪ, ವೆಂಕಟೇಶ, ದೇವಿಂದ್ರ, ಸುಭಾಷ್ ಪೂಜಾರಿ, ಜಮಾಲಸಾಬ್, ಶರಣಗೌಡ, ಸೋಮಣಗೌಡ ಸೇರಿದಂತೆ ನೂರಾರಯ ಪೋಷಕರು, ವಿದ್ಯಾರ್ಥಿಗಳು ಹಾಗೂ ಸಂಘಟನೆಯ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

### ಶಾಲೆ-ಕಾಲೇಜುಗಳ ಆರಂಭದೊಂದಿಗೆ ಹಾಸ್ಟೆಲ್‌ಗಳನ್ನು ಆರಂಭಿಸಲು ಎಸ್‌ಎಫ್‌ಐ ಆಗ್ರಹ

# ಜಾಲಹಳ್ಳಿಯಲ್ಲಿ ಮಹಿಳಾ ವಸತಿ ನಿಲಯ ಮಂಜೂರು ಮಾಡಿ-ಶಬ್ಬೀರ್

■ ಕನ್ನಡ ಮಾತೃ ಭೂಮಿ ವಾರ್ತೆ

**ಜಾಲಹಳ್ಳಿ, ಜೂ.9-** 2026-27ನೇ ಶೈಕ್ಷಣಿಕ ವರ್ಷ ಆರಂಭಗೊಂಡು ಶಾಲೆ-ಕಾಲೇಜುಗಳಲ್ಲಿ ತರಗತಿಗಳು ಪ್ರಾರಂಭವಾಗಿದ್ದರೂ, ವಿದ್ಯಾರ್ಥಿ ನಿಲಯಗಳನ್ನು (ಹಾಸ್ಟೆಲ್‌ಗಳನ್ನು) ಇನ್ನೂ ಆರಂಭಿಸದಿರುವುದನ್ನು ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್‌ಎಫ್‌ಐ) ದೇವದುರ್ಗ ತಾಲೂಕು ಸಮಿತಿ ಮುಖಂಡರು ಖಂಡಿಸಿ ಕರ್ನಾಟಕ ಸರ್ಕಾರದ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಬರೆದ ಮನವಿ ಪತ್ರವನ್ನು ನಾಡ ತಹಸೀಲ್ದಾರ್ ಗೋವಿಂದ ಅವರ ಮೂಲಕ ಮಂಗಳವಾರ ಸಲ್ಲಿಸಿದರು,

ಬಳಿಕ ಎಸ್ ಎಫ್ ಐ ತಾಲೂಕು ಅಧ್ಯಕ್ಷ ಮಹಾಲಿಂಗ ದೊಡ್ಡಮನಿ ಮಾತನಾಡಿ ಶಾಲೆ-ಕಾಲೇಜುಗಳ ಆರಂಭದೊಂದಿಗೆ ಹಾಸ್ಟೆಲ್‌ಗಳನ್ನು ಕೂಡ ತಕ್ಷಣ ಆರಂಭಿಸಬೇಕೆಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು.

ಹಾಸ್ಟೆಲ್ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳು ಆಯ್ಕೆ ಪಟ್ಟಿ ಪ್ರಕಟವಾಗುವ ನಿರೀಕ್ಷೆಯಲ್ಲಿ ಪ್ರತಿದಿನ ದೂರದ ಗ್ರಾಮಗಳಿಂದ ಕಾಲೇಜುಗಳಿಗೆ ಸಂಚರಿಸಿ ಹೆಚ್ಚಿನ ಹಣ ಖರ್ಚು ಮಾಡುತ್ತಿದ್ದಾರೆ. ಸಮರ್ಪಕ ಬಸ್ ಸೌಲಭ್ಯವಿಲ್ಲದ




ಕಾರಣ ವಿದ್ಯಾರ್ಥಿಗಳು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದು, ಕೂಡಲೇ ಆಯ್ಕೆ ಪಟ್ಟಿ ಪ್ರಕಟಿಸಿ ಹಾಸ್ಟೆಲ್ ಸೌಲಭ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿದ್ದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸರ್ಕಾರದ ಆದೇಶದಂತೆ ಎಲ್ಲ ಅರ್ಹ ವಿದ್ಯಾರ್ಥಿಗಳಿಗೂ ವಸತಿ ಸೌಲಭ್ಯ ಒದಗಿಸಬೇಕು. ಅಲ್ಲದೆ, ಮೆರಿಟ್ ಆಧಾರಿತ ಆಯ್ಕೆ ಪದ್ಧತಿಯನ್ನು ಕೈಬಿಟ್ಟು, ಅರ್ಜಿ ಸಲ್ಲಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆಯನ್ನು ವಿಸ್ತರಿಸಬೇಕು ಎಂದ ಹೇಳಿದರು

ಬಳಿಕ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಸಂಘಟನೆಯ ರಾಜ್ಯ ಕಾರ್ಯದರ್ಶಿ ಶಬ್ಬೀರ್ ಜಾಲಹಳ್ಳಿ. ಮಾತನಾಡಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ಹಾಸ್ಟೆಲ್‌ಗಳನ್ನು ಸ್ಥಾಪಿಸಿ, ಉತ್ತಮ ಗುಣಮಟ್ಟದ ಆಹಾರ, ಶುಚಿತ್ವ ಕಿಟ್‌ಗಳು, ತಟ್ಟೆ, ಲೋಟ, ಹಾಸಿಗೆ, ಬೆಡ್‌ಶೀಟ್ ಹಾಗೂ ಹೊದಿಕೆ ಸೇರಿದಂತೆ ಅಗತ್ಯ ವಸ್ತುಗಳನ್ನು ಒದಗಿಸಬೇಕು ಜೊತೆಗೆ ಸುಸಜ್ಜಿತ ಗ್ರಂಥಾಲಯ, ಸ್ಪರ್ಧಾತ್ಮಕ ಪರೀಕ್ಷೆಗಳ ಪುಸ್ತಕಗಳು, ಕಂಪ್ಯೂಟರ್ ಲ್ಯಾಬ್, ಉಚಿತ ವೈ-ಫೈ, ಶುದ್ಧ ಕುಡಿಯುವ ನೀರು ಸೇರಿದಂತೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು. ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆಯನ್ನು ಕೈಬಿಟ್ಟು, ವಿದ್ಯಾರ್ಥಿಗಳ ಆಹಾರ ಭತ್ಯೆಯನ್ನು ಕನಿಷ್ಠ ₹4,500ಕ್ಕೆ ಹೆಚಿಸಬೇಕೆಂದು ಹೇಳಿದರು

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರ ತಕ್ಷಣ ಅಗತ್ಯ ಕ್ರಮ ಕೈಗೊಂಡು, ಹಾಸ್ಟೆಲ್‌ಗಳನ್ನು ಕೂಡಲೇ ಆರಂಭಿಸಬೇಕು , ಜಾಲಹಳ್ಳಿ ಯಲ್ಲಿ ಮಹಿಳಾ ವಸತಿ ನಿಲಯ ಮಂಜೂರು ಮಾಡಲು ಒತ್ತಾಯಿಸಿದರು, ಇದೆ ಸಂದರ್ಭದಲ್ಲಿ ಎಸ್ ಎಫ್ ಐ ತಾಲೂಕು ಸಮಿತಿ ಮುಖಂಡರಾದ ಸಂತೋಷ್ ತ್ಯಾಪ್ಲಿ, ಅಭಿಷೇಕ್ . ಸಿಐಟಿಯು ಜಿಲ್ಲಾ ಮುಖಂಡ ಗಿರಿಯಪ್ಪ ಪೂಜಾರಿ,ಡಿವೈಎಫ್‌ಐ ಅಧ್ಯಕ್ಷ ರಿಯಾಜ್ ಆರ್ಥಿ, ಕಾರ್ಯದರ್ಶಿ ರಾಜು ನಾಯಕ, ಮೌನೇಶ, ಗ್ರಾಮ ಪಂಚಾಯಿತಿ ಸದಸ್ಯ ಮುಕ್ತಂ ಪಾಷಾ, ಬಸವರಾಜ ವಂದಲಿ, ಹನುಮಂತ ಮಡಿವಾಳ,ರಾಮಣ್ಣ, ಮೌನೇಶ ಚಪ್ಪಳಿಕಿ, ಬಾಲು ಘೋಷಾಲ್, ಅಮೀರ್ ಪಾಟೀಲ್, ರಿಯಾಜ್ ಖುರ್ಷಿ, ಮತ್ತು ಇತರರು,

# ರಾಜ್ಯಸಭೆ ಚುನಾವಣೆ: ಅಡ್ಡಮತದಾನ ತಡೆಯಲು ಕರ್ನಾಟಕಕ್ಕೆ ಮಧ್ಯಪ್ರದೇಶ ಕಾಂಗ್ರೆಸ್ ಶಾಸಕರ ರವಾನೆ..?

■ ಕನ್ನಡ ಮಾತೃ ಭೂಮಿ ವಾರ್ತೆ

**ಭೋಪಾಲ್(ಮಧ್ಯಪ್ರದೇಶ),ಜೂ.9-** ರಾಜ್ಯಸಭಾ ಚುನಾವಣೆಗೂ ಮುನ್ನ ಮಧ್ಯಪ್ರದೇಶದಲ್ಲಿ ರಾಜಕೀಯ ನಾಟಕ ಶು ರುವಾಗಿದೆ. ಪೂರ್ಣ ಬಹುಮತ ಇಲ್ಲದಿದ್ದರೂ ಬಿಜೆಪಿ ತನ್ನ ಮೂರನೇ ಅಭ್ಯರ್ಥಿಯನ್ನು ಘೋಷಿಸಿದೆ. ಈ ಮೂಲಕ ರಾಜ್ಯ ರಾಜಕೀಯದಲ್ಲಿ ಗೊಂದ ಲಗಳು ಸೃಷ್ಟಿಯಾಗಿವೆ. ಇತ್ತ, ಕಾಂಗ್ರೆಸ್ ತನ್ನ ಶಾಸಕರನ್ನು ಉಳಿಸಿಕೊಳ್ಳಲು ಮತ್ತು ಅಡ್ಡಮತ ದಾನ ತಡೆಯಲು ಅವರನ್ನು ಕರ್ನಾಟಕಕ್ಕೆ ಕರೆತರಲು ಮುಂದಾಗಿದೆ.

ಬಿಜೆಪಿಯು ತನ್ನ ಮೂರನೇ ಅಭ್ಯ ರ್ಥಿಯಾಗಿ ಮಹೇಶ್ ಕೆವತ್ ಅವರನ್ನು ಕಣಕ್ಕಿಳಿಸಿದೆ. ಅವರು ನಾಮಪತ್ರ ಸಲ್ಲಿಸಿದ ತಕ್ಷಣ ಕಾಂಗ್ರೆಸ್‌ನೊಳಗೆ ಗದ್ದಲ ತೀವ್ರಗೊಂಡಿದೆ. ಶಾಸಕರು ತಡರಾತ್ರಿಯವರೆಗೂ ವಿರೋಧ ಪಕ್ಷದ ನಾಯಕ ಉಮಾಂಗ್ ಸಿಂಘರ್ ಅವರ ಮನೆಯಲ್ಲಿದ್ದರು.

ಸಿಂಘರ್ ಅವರ ನಿವಾಸದಲ್ಲಿ ತಡರಾತ್ರಿ ನಡೆದ ಸಭೆಯ ನಂತರ, ಸಮಗ್ರ ಕಾರ್ಯತಂತ್ರವನ್ನು ರೂಪಿಸಿ ಪಕ್ಷದ ಹೈಕಮಾಂಡ್‌ಗೆ ಕಳುಹಿಸಲಾಗಿದೆ ಎಂದು ವರದಿಯಾಗಿದೆ. ರಾಜ್ಯಸಭಾ ಮತದಾನದ ವೇಳೆ ಅಡ್ಡಮತದಾನ ತಡೆಯಲು ಕಾಂಗ್ರೆಸ್ ತನ್ನ ಶಾಸಕರನ್ನು ಖಾಸಗಿ ಜೆಟ್ ಮೂಲಕ ಕರ್ನಾಟಕಕ್ಕೆ ಕರೆದೊಯ್ಯುತ್ತಿದೆ ಎಂದು ತಿಳಿದುಬಂದಿದೆ.



ಖಾಸಗಿ ಜೆಟ್‌ನಲ್ಲಿ ಕರ್ನಾಟಕಕ್ಕೆ ಶಾಸಕರು: ಮೂರನೇ ರಾಜ್ಯಸಭಾ ಸ್ಥಾನಕ್ಕೆ ಬಿಜೆಪಿ ಅಭ್ಯರ್ಥಿಯನ್ನು ಕಣಕ್ಕಿಳಿಸಿದಾಗಿನಿಂದ ಮಧ್ಯಪ್ರದೇಶದಲ್ಲಿ ರಾಜಕೀಯ ಬೆಳವಣಿಗೆಗಳು ಕ್ಷಣಕ್ಷಣವೂ ಬದಲಾಗುತ್ತಿವೆ.

ಬಿಜೆಪಿ ಮತ್ತು ಕಾಂಗ್ರೆಸ್ ಕೇವಲ ಒಂದೂವರೆ ಗಂಟೆಯ ಅಂತರದಲ್ಲಿ ತಮ್ಮ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ತರುವಾಯ, ಕಾಂಗ್ರೆಸ್ ಶಾಸಕರನ್ನು ಉಮಾಂಗ್ ಸಿಂಘರ್ ಅವರ ಬಂಗಲೆಗೆ ಕರೆಸಲಾಯಿತು. ಅಲ್ಲಿ ಅವರೊಂದಿಗೆ ಚರ್ಚಿಸಿದ ನಂತರ ಒಂದು ಕಾರ್ಯತಂತ್ರವನ್ನು ಅಂತಿಮ ಗೊಳಿಸ ಲಾಯಿತು. ಮುಂದಿನ 10 ದಿನಗಳವರೆಗೆ ಶಾಸಕರನ್ನು ಉಳಿಸಿಕೊಳ್ಳಲು ಪಕ್ಷವು ಯೋಜನೆಯನ್ನು ರೂಪಿಸಿದೆ. ಅದನ್ನು ಹೈಕಮಾಂಡ್‌ಗೆ ತಿಳಿಸಿದೆ. ಅಲ್ಲಿಂದ ಗ್ರೀನ್ ಸಿಗ್ನಲ್ ದೊರೆತ ನಂತರ, ಶಾಸಕರು ಕರ್ನಾಟ ಕಕ್ಕೆ ಬರಲಿದ್ದಾರೆ ಎಂದು ಹೇಳಲಾಗಿದೆ.

ಮಾತನಾಡಿದ ಉಮಾಂಗ್ ಸಿಂಘರ್ ಅವರು, ಬಹುಮತದ ಕೊರತೆ ಇದ್ದರೂ ಬಿಜೆಪಿ ತನ್ನ ಮೂರನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಕಾಂಗ್ರೆಸ್ ಶಾಸಕರನ್ನು ಸೆಳೆಯಲು ಅದು ಪ್ರಯತ್ನಿಸುತ್ತಿದೆ. ಇದಕ್ಕೆ ನಾವು ಆಸ್ಪದ ಕೊಡುವುದಿಲ್ಲ ಎಂದು ಹೇಳಿದರು.

## ಜೂ.11 ರಂದು ಸಿರವಾರದಲ್ಲಿ ಚುಕ್ಕಿ ಪ್ರತಿಷ್ಠಾನದಿಂದ 50 ನೇ ವರ್ಷ ಪುಣ್ಯಾರಾಧನೆ, ಬಸವ ತತ್ವ ಚಿಂತನಾ ಗೋಷ್ಟಿ-ಚುಕ್ಕಿ ಸೂಗಪ್ಪ ಸಾಹುಕಾರ

ಸಂವಾದ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮವನ್ನು ಮಾಜಿ ಸಚಿವ ಎನ್.ಎಸ್.ಬೋಸರಾಜ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಆಳಂದ ಶ್ರೀ ಜಗದ್ಗುರು ತೋಂಟದ ಸಿದ್ದೇಶ್ವರ ಅನುಭವ ಮಂಟಪದ ಶ್ರೀ ವಿಶ್ವನಾಥ ಕೋರಣೇಶ್ವರ ಸ್ವಾಮೀಜಿ ವಹಿಸಲಿದ್ದಾರೆ. ಅತಿಥಿಗಳಾಗಿ ಮಾನವಿ ಶಾಸಕ ಹಂಪಯ್ಯನಾಯಕ ಸಾಹುಕಾರ, ಸಂಸದ ಜಿ.ಕುಮಾರನಾಯಕ, ಬೀದರ ಜಾಗತಿಕಮಹಾಸಭಾದ ಜಿಲ್ಲಾಧ್ಯಕ್ಷ ಬಸವರಾಜ ಧನ್ನೂರು, ಡಾ.ಜೆ.ಎಸ್.ಪಾಟೀಲ್, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿದ್ಯಾಲಯದ ಜ್ಯೋತಿ ಅಕ್ಕ, ರಾಯಚೂರುಬಸವ ಕೇಂದ್ರ ಅಧ್ಯಕ್ಷ ರಾಚನಗೌಡ ಕೋಳ್ಳೂರು, ವೀರಶೈವ ಸಮಾಜದ ಅಧ್ಯಕ್ಷ ಶರಣಭೂಪಾಲ ನಾಡಗೌಡ, ಜಾಗೀರ ಜಾಡಲದಿನ್ನಿ ನೀಲಾಂಬಿಕಾ ಯೋಗಾಶ್ರಮದ ಶ್ರೀ ವೀರಭದ್ರಯ್ಯಸ್ವಾಮಿ, ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಮಹಾಂತೇಶ ನವಲಕಲ್, ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ, ಬಸವಕೇಂದ್ರ ಕಾರ್ಯದರ್ಸಿ ಮಹಾಜನ ಶೆಟ್ಟಿ, ಎಪಿಎಂಸಿ ಮಾಜಿ ಅಧ್ಯಕ್ಷ ಕೆ.ಶಾಂತಪ್ಪ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಡಾ.ಅಮರೇಶ ನುಗಡೋಣಿ ಇವರಿಗೆ ವಿಶೇಷ ಸನ್ಮಾನ ಕಾರ್ಯಕ್ರಮ ನಡೆಯಲಿದೆ.

ಸಂಜೆ 6 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದ್ದು, ನವಲಕಲ್ ಬೃಹನ್ಮಠದ ಶ್ರೀ ಅಭಿನವ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಬೆಳಗಾವಿ ಬಸವ ಬೆಳವಿ ಶ್ರೀ ಶರಣಬಸವ ದೇವರು ಸಮ್ಮುಖದಲ್ಲಿ ನಡೆಯಲಿದೆ. ಅಧ್ಯಕ್ಷತೆಯನ್ನು ಚುಕ್ಕಿ ಸೂಗಪ್ಪ ವಹಿಸಿಕೊಳ್ಳಲಿದ್ದಾರೆ. ಅತಿಥಿಗಳಾಗಿ ಭದ್ರಾವತಿಯ ಬಸವಾಂಬಿಕಾ ಬಸವರಾಜ, ಚಂದ್ರಶೇಖರ ಪಾಟೀಲ್ ಮಿರ್ಜಾಪುರು, ಎಚ್.ಎಂ.ರೇಣುಕಾ ಪ್ರಸನ್ನ, ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರು, ಎನ್.ಗಿರಿಜಾಶಂಕರ, ಮಹಾಂತೇಶ ಪಾಟೀಲ್ ಅತ್ತನೂರು, ಜೆ.ಶರಣಪ್ಪಗೌಡ, ಜೆ.ಸಿ.ಪಾಟೀಲ್, ಡಾ.ಪರಮೇಶ್ವರ ಸಾಲಿಮಠ ಭಾಗವಹಿಸಲಿದ್ದಾರೆ.

2026-27 ಸಾಲಿನ ಕೃತಿ ಪ್ರಶಸ್ತಿಗೆ ಕಲ್ಬುರ್ಗಿಯ ಡಾ.ಎಚ್.ಟಿ.ಪೋತೆಯವರ ಮಹಾಯಾನ ಮತ್ತು ಸಿಂಧನೂರಿನ ಪ್ರಹ್ಲಾದ ಗುಡಿ ಇವರ ನಾ ಕಂಡ ನಮ್ಮವರು ಕೃತಿಗಳಿಗೆ ಪ್ರಶಸ್ತಿ ನೀಡಲಾಗುತ್ತದೆ ಎಂದರು.

ಡಾ.ಪರಮೇಶ್ವರಪ್ಪ ಸಾಲಿಮಠ ಮಾತನಾಡಿ ಕಳೆದ 50 ವರ್ಷಗಳಿಂದ ಚುಕ್ಕಿ ಪ್ರತಿಷ್ಟಾನದಿಂದ ಸ್ಮರಣೋತ್ಸವ, ಬಸವ ತತ್ವ ಚಿಂತನಾ ಗೋಷ್ಟಿ ನಿರಂತರವಾಗಿ ನಡೆಸಿಕೊಂಡು ಬರಲಾಗುತ್ತಿದೆ. ಈ ಬಾರಿ ಎರಡು ಕೃತಿಗಳಿಗೆ ಪ್ರಶಸ್ತಿ ನೀಡಲಾಗುತ್ತಿದೆ ಎಂದರು. ಈ ಸಂದರ್ಬದಲ್ಲಿ ಶಿವಾನಂದ ಚುಕ್ಕಿ, ಮಲ್ಲಿಕಾರ್ಜುನ ಹಳ್ಳೂರು ಇದ್ದರು.

## ಮಂಡ್ಯ: ಪತ್ನಿ, ನವವಿವಾಹಿತ ಮಗನ ಕೊಂದು ಬಟ್ಟೆ ವ್ಯಾಪಾರಿ ಆತ್ಮಹತ್ಯೆ

ಕೇವಲ ಒಂದು ತಿಂಗಳ ಹಿಂದಷ್ಟೇ ಸಂತೋಷ್ ಅವರ ಮದುವೆ ಆಗಿತ್ತು. ಬಾಡಿಗೆ ಮನೆಯಲ್ಲಿದ್ದ ಇವರು, ರಾತ್ರಿ ಊಟ ಮುಗಿಸಿ ಒಂದು ರೂಮಿನಲ್ಲಿ ಜ್ಯೋತಿ ಮತ್ತು ಪ್ರಭಾಕರ್ ಇನ್ನೊಂದು ರೂಮಿನಲ್ಲಿ ನವವಿವಾಹಿತ ಸಂತೋಷ್ ಮತ್ತು ಪತ್ನಿ ಮಲಗಿದ್ದರು.

ಬೆಳಗ್ಗೆ ಸಂತೋಷ್ ಪತ್ನಿ ಎದ್ದು ಅತ್ತೆಯನ್ನೆಬ್ಬಿಸಲು ಬೆಡ್‌ರೂಂಗೆ ಹೋದಾಗ ಅವರು ಮೃತಪಟ್ಟಿರುವುದು ಗೊತ್ತಾಗಿದೆ. ರಾತ್ರಿ ತಮ್ಮ ರೂಂನಿಂದ ಪತಿ ಹೊರಗಡೆ ಹೋಗಿದ್ದು ಗೊತ್ತಾಗಿಲ್ಲ. ಫ್ಯಾನ್ ಶಬ್ದ ಇದ್ದುದರಿಂದ ಯಾವುದೇ ಶಬ್ದ ಕೇಳಿಸಿಲ್ಲ ಎಂದು ಸಂತೋಷ್ ಅವರ ಪತ್ನಿ ಹೇಳಿದ್ದಾಗಿ ಮಂಡ್ಯ ಎಸ್‌ಪಿ ಶೋಭಾರಾಣಿ ತಿಳಿಸಿದ್ದಾರೆ.

ಡೆತ್ ನೋಟ್ ಪತ್ತೆ: ಸಾಲದ ಒತ್ತಡ ಹಾಗೂ ವ್ಯಾಪಾರದಲ್ಲಿ ಉಂಟಾದ ನಷ್ಟದಿಂದ ಬೇಸತ್ತು ಪ್ರಭಾಕರ್ ತಮ್ಮ ಪತ್ನಿ ಮತ್ತು ಮಗನನ್ನು ಉಸಿರುಗಟ್ಟಿಸಿ ಕೊಂದು, ಬಳಿಕ ತಾವೂ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಪ್ರಭಾಕರ್ ಡೆತ್‌ನೋಟ್ ಬರೆದಿಟ್ಟಿದ್ದಾರೆ ಎಂದು ಎಸ್‌ಪಿ ಮಾಹಿತಿ ನೀಡಿದರು.

ಮನೆ ಸಾಲದ ಇಎಂಐಒತ್ತಡ ಮತ್ತು ವ್ಯಾಪಾರದಲ್ಲಿ ಆರ್ಥಿಕ ನಷ್ಟ ಉಂಟಾಗಿದೆ ಎಂಬುದನ್ನು ಡೆತ್‌ನೋಟ್‌ನಲ್ಲಿ ಪ್ರಭಾಕರ್ ಬರೆದಿದ್ದಾರೆ.

ಹಾಗೆಯೇ ರಾಜ್ಯ ಸರ್ಕಾರದ 'ಶಕ್ತಿ ಯೋಜನೆ'ಯಿಂದ ಜನರು ಉಚಿತವಾಗಿ ಪ್ರಯಾಣ ಮಾಡುತ್ತಿರುವುದಿಂದ ವ್ಯಾಪಾರ ಕುಂಠಿತವಾಗಿದೆ ಎಂದೂ ಉಲ್ಲೇಖಿಸಿದ್ದಾರೆ.

ಹಾಗೆಯೇ ಪತ್ನಿಯನ್ನು ತಾನೇ ಕೊಲೆ ಮಾಡಿರುವುದಾಗಿಯೂ ಬರೆದಿದ್ದಾರೆ ಎಂದು ಎಸ್‌ಪಿ ತಿಳಿಸಿದ್ದಾರೆ. ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L